ದಾನ ಮಾಡಿರಿ,
ಆದರೆ ಅದರಿಂದ
ಪ್ರತಿಫಲ
ನಿರೀಕ್ಷಿಸಬೇಡಿ.
ಅದು ತಾನಾಗಿಯೇ
ವಾಪಸ್ ಬರಲಿದೆ
–ಸ್ವಾಮಿ ವಿವೇಕಾನಂದ

# ಬೀದರವಾಣಿ

ಬೀದರ ಜಿಲ್ಲೆಯ ನಿರ್ಭಯ, ನಿಷ್ಪಕ್ಷಪಾತ ಏಕೈಕ ಅಂತರಜಾಲ(Online)

ಸಂಪಾದಕರು:ಸಿದ್ರಾಮಯ್ಯ ಸ್ವಾಮಿ    EDITOR:SIDRAMAYYA SWAMY

ಸೋತೆ ಎಂದು ನೀ
ಮುಂದಿಟ್ಟ ಹೆಜ್ಜೆ
ಹಿಂದಿಡಬೇಡ...
ಏಕೆಂದರೆ...
ಯಾರಿಗೆ ಗೊತ್ತು ಆ ಹೆಜ್ಜೆ
ನಿನ್ನ ಇತಿಹಾಸವನೇ ಸೃಷ್ಟಿ
ಮಾಡುವ
ಹೆಜ್ಜೆಯಾಗಿರಬಹುದು...

bidarvani.com | ಇ-ಪೇಪರ್bidarvani.online | bidarvani | bidarvani@gmail.com | Whatsapp | Contact:9148471077

KARKAN/77693/2019 | ಸಂಪುಟ:08 | ಸಂಚಿಕೆ:181 | ದಿನಾಂಕ:16.10.2025 | ಗುರುವಾರ | ಪುಟ.4 | ಬೆಲೆ:02 ರೂ | ಮೊ.9945793175

## ಮಳೆ ಹಾನಿ: ಅ.30ರೊಳಗೆ 300 ಕೋಟಿ ರೂ. ಪರಿಹಾರ ಪಾವತಿ– ಈಶ್ವರ ಖಂಡ್ರೆ

## 24 ಗಂಟೆಯೊಳಗೆ ಮನೆಹಾನಿ ಪರಿಹಾರ ಪಾವತಿಸಲು ಕಟ್ಟುನಿಟ್ಟಿನ ಸೂಚನೆ

ಬೀದರ.ಅ.15:ಬೀದರ್ ಜಿಲ್ಲೆಯಲ್ಲಿ ಸೆಪ್ಟೆಂಬರ್‌ನಲ್ಲಿ ಸುರಿದ ಧಾರಾಕಾರ ಮಳೆಯಿಂದ ಆಗಿರುವ ಬೆಳೆ ಹಾನಿಗೆ ಮುಖ್ಯಮಂತ್ರಿಗಳು ಘೋಷಿಸಿರುವ ಪ್ರತಿ ಹೆಕ್ಟೇರ್ ಗೆ ಹೆಚ್ಚುವರಿ 8500 ರೂ. ಪರಿಹಾರವೂ ಸೇರಿದಂತೆ ಒಟ್ಟಾರೆ 300 ಕೋಟಿ ರೂ. ಬೆಳೆ ಹಾನಿ ಪರಿಹಾರವನ್ನು ಅ.30ರೊಳಗೆ ಪಾವತಿಸಲಾಗುವುದು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ ಖಂಡ್ರೆ ಸೂಚಿಸಿದ್ದಾರೆ.



ಅವರು ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ವಿಪತ್ತು ನಿರ್ವಹಣಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ನಾಳೆ ಸಂಜೆಯೊಳಗೆ ಮಳೆ ಹಾನಿ ಪ್ರದೇಶದ ತಹಶೀಲ್ದಾರರು ಪರಿಹಾರದ ಪೋರ್ಟಲ್‌ನಲ್ಲಿ ಹಾನಿಯ ಪ್ರಮಾಣವನ್ನು ಕಡ್ಡಾಯವಾಗಿ ದಾಖಲಿಸಿ,ಪರಿಹಾರ ನೀಡಿಕೆಗೆ ತುರ್ತು ಕ್ರಮ ವಹಿಸಬೇಕು ಎಂದು ಸ್ಪಷ್ಟ ಸೂಚನೆ ನೀಡಿದರು. ಎನ್.ಡಿ.ಆರ್. ಎಫ್. ಮತ್ತು ಎಸ್.ಡಿ.ಆರ್. ಎಫ್. ನಿಯಮದಂತೆ 170 ಕೋಟಿ ರೂಪಾಯಿ ಪರಿಹಾರವನ್ನು ಈಗಾಗಲೇ ಪಾವತಿಸಲಾಗುತ್ತಿದೆ. ಅಕ್ಟೋಬರ್ 30ರೊಳಗೆ 300 ಕೋಟಿ ರೂ.ಪರಿಹಾರ ಮೊತ್ತ ಪಾವತಿಸಲಾಗುವುದು ಎಂದು ಸ್ಪಷ್ಟಪಡಿಸಿದರು.

ಸಭೆಯಲ್ಲಿ ಅಕಾಲಿಕ ಮಳೆಯಿಂದ ಉಂಟಾಗಿರುವ ಜೀವಹಾನಿ, ಬೆಳೆಹಾನಿ, ಮನೆ ಹಾನಿ, ಜಾನುವಾರು ಹಾನಿಗೆ ದೀಪಾವಳಿಯೊಳಗೆ ಪರಿಹಾರ ನೀಡುವುದಾಗಿ ಪ್ರಕಟಿಸಲಾಗಿದೆ. ಈ ನಿಟ್ಟಿನಲ್ಲಿ ಅಧಿಕಾರಿಗಳು ಮಾನವೀಯ ನೆಲೆಗಟ್ಟಿನಲ್ಲಿ ಹಗಲಿರುಳು ಶ್ರಮಿಸಿ, ವಿಕೋಪದಿಂದ ಸಂಕಷ್ಟಕ್ಕೆ ಸಿಲುಕಿರುವ ಕುಟುಂಬದವರ ನೆರವಿಗೆ ಧಾವಿಸಬೇಕು ಎಂದು ಆದೇಶ ನೀಡಿದರು.

ಬಸವಕಲ್ಯಾಣದಲ್ಲಿ 47, ಭಾಲ್ಕಿ 38, ಬೀದರ್ ತಾಲೂಕಿನಲ್ಲಿ ಮನೆ ಹಾನಿಗೊಳಗಾದವರಿಗೆ ಪರಿಹಾರ ನೀಡಿಕೆಯಲ್ಲಿ ವಿಳಂಭವಾಗಿರುವ ಕುರಿತಂತೆ ತಹಶೀಲ್ದಾರರನ್ನು ತರಾಟೆಗೆ ತೆಗೆದುಕೊಂಡ ಈಶ್ವರ ಖಂಡ್ರೆ, ಇಂದು ಅಥವಾ ನಾಳೆ ಸಂಜೆಯೊಳಗೆ ಮನೆ ಹಾನಿಯ ಪರಿಹಾರ ಸಂತ್ರಸ್ತರಿಗೆ ದೊರಕುವುದನ್ನು ಖಾತ್ರಿಪಡಿಸಿಕೊಳ್ಳುವಂತೆ ತಿಳಿಸಿ,ವಿಳಂಬ,ಕರ್ತವ್ಯ ಲೋಪ,ನಿರ್ಲಕ್ಷ್ಯ ತೋರಿರುವ ಅಧಿಕಾರಿ, ಸಿಬ್ಬಂದಿಗೆ ಕಾರಣ ಕೇಳಿ ನೋಟಿಸ್ ನೀಡುವಂತೆ ಸೂಚಿಸಿದರು.

ಮಳೆ ಹಾನಿಗೆ ಸಂಬಂಧಿಸಿದಂತೆ ಪರಿಹಾರ ಪೋರ್ಟಲ್ ನಲ್ಲಿ ದಾಖಲಿಸುವ ಪ್ರತಿಯೊಂದು ಮಾಹಿತಿಯನ್ನೂ ಗ್ರಾಮಪಂಚಾಯತಿ, ತಹಶೀಲ್ದಾರರ ಕಚೇರಿ ಮತ್ತು ರೈತ ಸಂಪರ್ಕ ಕೇಂದ್ರಗಳಲ್ಲಿ ಬಹಿರಂಗವಾಗಿ ಪ್ರಕಟಿಸಿ, ಡಂಗೂರ ಹೊಡೆಸಿ, ಆಕ್ಷೇಪಣೆ ಆಹ್ವಾನಿಸಿ, ಯಾವುದೇ ಸಂತ್ರಸ್ತರ ಮಾಹಿತಿ ಕಣ್ತಪ್ಪಿನಿಂದ ಬಿಟ್ಟುಹೋಗಿದ್ದರೆ ಆಗ ಅವರ ಹೆಸರು ಸೇರ್ಪಡೆ ಮಾಡಲು ಸಹಕಾರಿ ಆಗುತ್ತದೆ ಎಂದು ಈಶ್ವರ ಖಂಡ್ರೆ ತಿಳಿಸಿದರು.

ಬೆಳೆ ವಿಮೆಯಡಿ ಬೆಳೆ ಋತುವಿನ ಮಧ್ಯದಲ್ಲಿ ವಿಕೋಪ ಉಂಟಾದರೆ ಪರಿಹಾರದ ಅವಕಾಶ ಕಲ್ಪಿಸಿದರೆ (ಮಿಡ್ ಸೀಸನ್ ಅಡ್ವರ್ಸಿಟಿ ಇನ್ವೋಕ್) ರೈತರಿಗೆ ಸೂಕ್ತ ಪರಿಹಾರ ಸಿಗುತ್ತದೆ. ಇನ್ವೋಕ್ ಆಗದಿದ್ದರೆ ರೈತರಿಗೆ ಅನ್ಯಾಯ ಆಗುತ್ತಿದೆ. ಕೂಡಲೇ ಈ ಬಗ್ಗೆ ಕ್ರಮವಹಿಸಿ ಎಂದು ಕೃಷಿ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಕಡಿದು ನೆಲದ ಮೇಲೆ ಬಿದ್ದಿದ್ದ ವಿದ್ಯುತ್ ಪ್ರವಹಿಸುತ್ತಿದ್ದ ತಂತಿ ತುಳಿದು ವ್ಯಕ್ತಿಯೊಬ್ಬರು ಮೃತಪಟ್ಟಿರುವ ಬಗ್ಗೆ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಅವರು ಪ್ರಸ್ತಾಪಿಸಿದಾಗ, ಆಘಾತ ವ್ಯಕ್ತಪಡಿಸಿದ ಈಶ್ವರ ಖಂಡ್ರೆ, ಜಿಲ್ಲೆಯಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಸೂಚಿಸಿ, ವಿದ್ಯುತ್ ತಂತಿಗಳು ಜಾಯಿಂಟ್ ಹಾಕಿರುವ ಕಡೆ ಕತ್ತರಿಸಿ ಬೀಳದಂತೆ ಕವರ್ ಕಂಡಕ್ಟರ್ ಗಳನ್ನು ಅಳವಡಿಸಲು ಸೂಚಿಸಿದರು.

## ಯರನಳ್ಳಿ ಕೇಂದ್ರದಲ್ಲಿ ಪೋಷಣ ಮಾಸಾಚರಣೆ

ಬೀದರ.ಅ.15:ಬೀದರ ತಾಲೂಕಿನ ಯರನಳ್ಳಿ ವಲಯದ ಅಂಗನವಾಡಿ ಕೇಂದ್ರ ಸಂಖ್ಯೆ 1ರಲ್ಲಿ ರಾಷ್ಟ್ರೀಯ ಪೋಷಣ ಮಾಸಾಚರಣೆ ಅಂಗವಾಗಿ ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಯಿತು.

ಈ ಕಾರ್ಯಕ್ರಮದ ಉದ್ದೇಶ ಪೌಷ್ಟಿಕ ಆಹಾರದ ಮಹತ್ವ ತಿಳಿಸುವುದು, ಮಕ್ಕಳ ಅಪೌಷ್ಟಿಕತೆ ನಿವಾರಣೆ, ರಕ್ತಹೀನತೆ ತಡೆಗಟ್ಟುವುದು ಹಾಗೂ ಗರ್ಭಿಣಿ ಬಾಣಂತಿಯರ ಆರೈಕೆಯ ಕುರಿತು ಅರಿವು ಮೂಡಿಸುವುದಾಗಿದೆ. ಪೋಷಣ ಮಾಸದ ಅಂಗವಾಗಿ ಅನ್ನಪ್ರಸಾದ, ಸಹಪೋಷಣೆ, ಗರ್ಭಿಣಿಯರಿಗೆ ಸೀಮಂತ ಕಾರ್ಯಕ್ರಮ ಮತ್ತು ಮಕ್ಕಳ ಬೆಳವಣಿಗೆ ಕುರಿತು ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಭಾಗವಹಿಸಿದ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಶ್ರೀಮತಿ ಗೋದಾವರಿಯವರು ಮಾತನಾಡಿ, “ಅಂಗನವಾಡಿ ಕಾರ್ಯಕರ್ತೆಯರು ಮಕ್ಕಳ ಎರಡನೇ ತಾಯಿಯಂತೆ ಕಾರ್ಯನಿರ್ವಹಿಸುತ್ತಿದ್ದಾರೆ. ಇಂತಹ ಕಾರ್ಯಕ್ರಮಗಳು ಸಮಾಜಕ್ಕೆ ಬಹು ಉಪಯುಕ್ತ” ಎಂದು ಹೇಳಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಹನಿಸಬೇಗಂ, ಅಭಿವೃದ್ಧಿ ಅಧಿಕಾರಿ ಗೋದಾವರಿ, ಮೇಲ್ವಿಚಾರಕಿ ಶ್ರೀಮತಿ ಪ್ರೇಮಲತಾ, ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕರು, ಗರ್ಭಿಣಿಯರು, ಬಾಣಂತಿಯರು, ಮಕ್ಕಳು ಮತ್ತು ಆರೋಗ್ಯ ಸಿಬ್ಬಂದಿಗಳು ಸಕ್ರಿಯವಾಗಿ ಪಾಲ್ಗೊಂಡರು



## ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿ ಪರಿಷ್ಕರಣೆ:

## ಹೆಸರು ನೊಂದಣಿಗೆ ಅರ್ಜಿ ಸಲ್ಲಿಸಲು ನವೆಂಬರ್.6 ಕೊನೆ ದಿನ

ಬೀದರ.ಅ.15:ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿ ಪರಿಷ್ಕರಣೆ ಹಿನ್ನೆಲೆಯಲ್ಲಿ ಅರ್ಹತಾ ದಿನಾಂಕ 01–11–2025ಕ್ಕೆ ಅನ್ವಯಿಸುವಂತೆ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ನಡೆದಿದ್ದು, ಅರ್ಹ ಮತದಾರರು ಪಟ್ಟಿಯಲ್ಲಿ ಹೆಸರು ಸೇರ್ಪಡೆಗೆ ದಿನಾಂಕ: 06–11–2025 ಕೊನೆಯ ದಿನವಾಗಿದೆ ಎಂದು ಕ್ಷೇತ್ರದ ಚುನಾವಣಾಧಿಕಾರಿಯಾಗಿರುವ ಪ್ರಾದೇಶಿಕ ಆಯುಕ್ತೆ ಜಹೀರಾ ನಸೀಮ್ ಅವರು ತಿಳಿಸಿದ್ದಾರೆ.

ಮತದಾರರ ಪರಿಷ್ಕರಣೆ ಭಾಗವಾಗಿ ಕರಡು ಮತದಾರರ ಪಟ್ಟಿಯನ್ನು ದಿನಾಂಕ: 25–11–2025 ರಂದು ಪ್ರಕಟಿಸಿ ದಿನಾಂಕ: 10–12–2025 ರೊಳಗೆ ರೊಳಗೆ ಆಕ್ಷೇಪಣೆ ಅಹ್ವಾನಿಸಲಾಗುತ್ತದೆ. ಅಂತಿಮ ಮತದಾರರ ಪಟ್ಟಿಯನ್ನು ದಿನಾಂಕ: 30–12–2025 ರಂದು ಪ್ರಕಟಿಸಲಾಗುತ್ತದೆ ಎಂದು ಮತದಾರರ ಪರಿಷ್ಕರಣೆ ಕಾರ್ಯದ ಬಗ್ಗೆ ಚುನಾವಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕ್ಷೇತ್ರಕ್ಕೆ ಪ್ರಾದೇಶಿಕ ಆಯುಕ್ತರು ಮತದಾರರ ನೋಂದಣಾಧಿಕಾರಿಯನ್ನಾಗಿ ಹಾಗೂ ಚುನಾವಣಾ ಕ್ಷೇತ್ರ ವ್ಯಾಪ್ತಿಗೊಳಪಡುವ ಕಲಬುರಗಿ ವಿಭಾಗದ ಎಲ್ಲಾ ಜಿಲ್ಲಾಧಿಕಾರಿಗಳು, ಕಲಬುರಗಿ ಹಾಗೂ ಬಳ್ಳಾರಿ, ಮಹಾನಗರ ಪಾಲಿಕೆ ಆಯುಕ್ತರು, ಕಲಬುರಗಿ ವಿಭಾಗದ ಆಯಾ ಉಪ ವಿಭಾಗಕ್ಕೆ ಸಂಬಂಧಪಟ್ಟ ಎಲ್ಲಾ ಸಹಾಯಕ ಆಯುಕ್ತರು, ವಿಭಾಗದ ಎಲ್ಲಾ ಸಂಬಂಧಪಟ್ಟ ತಾಲ್ಲೂಕಿನ ತಹಸೀಲ್ದಾರರ ಸಹಾಯಕ ಮತದಾರರ ನೋಂದಣಾಧಿಕಾರಿಯನ್ನಾಗಿ ನೇಮಿಸಿರುತ್ತದೆ ಎಂದು ಅವರು ತಿಳಿಸಿದ್ದಾರೆ.

ಯಾವುದೇ ವ್ಯಕ್ತಿ ಅಂಚೆ ಮೂಲಕ ಮತದಾರರ ನೋಂದಣಾಧಿಕಾರಿಗಳು, ಸಹಾಯಕ ಮತದಾರರ ನೋಂದಣಾಧಿಕಾರಿಗಳಿಗೆ ಅರ್ಜಿ ಸಲ್ಲಿಸಿದಲ್ಲಿ ಅಂತಹ ಅರ್ಜಿದಾರರಿಗೆ ಗೊತ್ತುಪಡಿಸಿದ ಅಧಿಕಾರಿಯು ವಿಚಾರಣೆಗೆ ಹಾಜರಾಗಲು ಮತದಾರರಿಗೆ ನೋಟಿಸ್ ನೀಡುತ್ತಾರೆ. ವಿಚಾರಣೆಗೆ ಹಾಜರಾಗದೇ ಅಥವಾ ದಾಖಲೆಗಳನ್ನು ಹಾಜರುಪಡಿಸದೆ ಇದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುತ್ತದೆ.

ಈ ಹಿಂದೆ ಮತದಾರರ ಪಟ್ಟಿಯಲ್ಲಿ ಹೆಸರಿದ್ದರು ಸಹ ಇದೀಗ ಪುನ: ನಮೂನೆ–19ರಲ್ಲಿ ಅರ್ಜಿ ಸಲ್ಲಿಸಬೇಕು. ಅರ್ಹ ಶಿಕ್ಷಕರು ಹೆಚ್ಚಿನ ಆಸಕ್ತಿ ವಹಿಸಿ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೊಂದಾಯಿಸಿಕೊಂಡು ಸುಭದ್ರ ಹಾಗೂ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸುವಲ್ಲಿ ಸಕ್ರೀಯವಾಗಿ ಪಾಲ್ಗೊಳ್ಳಬೇಕೆಂದು ಮತದಾರರ ನೋಂದಣಾಧಿಕಾರಿ ಜಹೀರಾ ನಸೀಮ ಅವರು ಮನವಿ ಮಾಡಿದ್ದಾರೆ.

ಹೆಸರು ನೋಂದಾಯಿಸಲು ಮಾರ್ಗಸೂಚಿಗಳ ವಿವರ:ಭಾರತದ ಪ್ರಜೆಯಾಗಿರುವ ಆಯಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸಾಮಾನ್ಯ ನಿವಾಸಿಯಾಗಿರುವ ಹಾಗೂ 1ನೇ ಸೆಪ್ಟೆಂಬರ್ 2025 ಕ್ಕೆ ಮೊದಲ 6 ವರ್ಷಗಳ ಅವಧಿಯಲ್ಲಿ ಸೆಕೆಂಡರಿ ದರ್ಜೆಯಲ್ಲಿ ಪ್ರೌಢ ಶಾಲೆಗಿಂತ ಕಡಿಮೆ ಇಲ್ಲದ ನಿರ್ಧಿಷ್ಟ ಪಡಿಸಿದಂತಹ ರಾಜ್ಯದೊಳಗಿನ ಯಾವುದೇ ಸರ್ಕಾರದಿಂದ ಮಾನ್ಯತೆ ಪಡೆದ ಶೈಕ್ಷಣಿಕ ಸಂಸ್ಥೆಗಳಲ್ಲಿ ಒಟ್ಟು ಕನಿಷ್ಠ 3 ವರ್ಷ ಬೋಧನಾ ವೃತ್ತಿಯಲ್ಲಿ ನಿರತವಾಗಿರುವ ಪ್ರತಿಯೊಬ್ಬ ವ್ಯಕ್ತಿಯು ಮತದಾರರ ಪಟ್ಟಿಯಲ್ಲಿ ತನ್ನ ಹೆಸರನ್ನು ಸೇರಿಸಲು ಅರ್ಹನಾಗಿರುತ್ತಾನೆ. ಹಾಗೇ ನಿರ್ಧಿಷ್ಟಪಡಿಸಿದ ಶೈಕ್ಷಣಿಕ ಸಂಸ್ಥೆಗಳ ಪಟ್ಟಿಯು ಮೊದಲನೇ ಅನುಸೂಚಿಯಲ್ಲಿ ತಿಳಿಸಿಲಾದ ಅಧಿಕಾರಿಗಳ ಬಳಿ ಇರುತ್ತದೆ.

ಖುದ್ದಾಗಿ ಅಥವಾ ಅಂಚೆ ಮುಖಾಂತರ ಒಟ್ಟಾರೆಯಾಗಿ ಸಲ್ಲಿಸಿದ (ಃಗಏಏ) ಅರ್ಜಿಗಳನ್ನು ಮತದಾರರ ನೋಂದಣಾಧಿಕಾರಿಯು ಮತದಾರರ ಪಟ್ಟಿಯಲ್ಲಿ ಸೇರ್ಪಡೆಗಾಗಿ ಪರಿಗಣಿಸತಕ್ಕದ್ದಲ್ಲ. ಆದರೆ ಸಂಸ್ಥೆಯ ಮುಖ್ಯಸ್ಥರು ಅವರ ಸಿಬ್ಬಂದಿಯವರ ಎಲ್ಲಾ ಅರ್ಜಿಗಳನ್ನು ಒಟ್ಟಾಗಿ ಮತದಾರರ ನೋಂದಣಾಧಿಕಾರಿಗಳಿಗೆ ಕಳುಹಿಸಬಹುದು. ಒಂದೇ ಕುಟಂಬದ ಎಲ್ಲಾ ಸದಸ್ಯರು ನಮೂನೆ 19 ರಲ್ಲಿ ಅರ್ಜಿಗಳನ್ನು ಕುಂಟುಂಬದ ಯಾವುದಾದರೂ ಸದಸ್ಯರು ಸಲ್ಲಿಸಬಹುದು ಹಾಗೂ ಪ್ರತಿ ಸದಸ್ಯನಿಗೆ ಸಂಬಂಧಿಸದಂತೆ ಮೂಲ ಪ್ರಮಾಣ ಪತ್ರಗಳನ್ನು ಒದಗಿಸಿ, ಪ್ರಮಾಣ ಪತ್ರವನ್ನು ಪರಿಶೀಲಿಸಿಕೊಳ್ಳತಕ್ಕದ್ದು. ಅರ್ಜಿದಾರರು ನಮೂನೆ–19ರ ಅರ್ಜಿಯೊಂದಿಗೆ ಆಧಾರ ಕಾರ್ಡ, ಚುನಾವಣಾ ಗುರುತಿನ ಚೀಟಿ ಹಾಗೂ ಬಿಳಿ ಬಣ್ಣದ ಹಿನ್ನೆಲೆ ಹೊಂದಿದ 2 ಪಾಸ್‌ಪೋರ್ಟ ಅಳತೆಯ ಭಾವಚಿತ್ರಗಳನ್ನು ಸಲ್ಲಿಸತಕ್ಕದ್ದು.

## ಕಪಪಮೀವಿವಿವು ಸ್ವಾವಲಂಬನೆಗೆ ಪ್ರೋತ್ಸಾಹ ನೀಡುತ್ತಿದೆ–ಪ್ರೋ.ಕೆ.ಸಿ.ವೀರಣ್ಣ

ಬೀದರ.ಅ.15:ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯವು ಹಲವಾರು ವರ್ಷಗಳಿಂದ ರೈತರಿಗೆ ನವೀನ ತಂತ್ರಜ್ಞಾನ, ಪಶುಪಾಲನೆ, ಹಾಲು ಉತ್ಪಾದನೆ, ಮೀನುಗಾರಿಕೆ ಹಾಗೂ ಕೃಷಿ ಉದ್ಯಮಶೀಲತೆಯ ಬಗ್ಗೆ ತರಬೇತಿ ನೀಡಿ ಸ್ವಾವಲಂಬನೆಗೆ ಪ್ರೋತ್ಸಾಹ ನೀಡುತ್ತಿದೆ ಎಂದು ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿ ಪ್ರೋ.ಕೆ.ಸಿ.ವೀರಣ್ಣ ಹೇಳಿದರು.

ಅವರು ಇತ್ತೀಚಿಗೆ ಕಪಪಮೀವಿವಿ ಬೀದರನಲ್ಲಿ ಐಸಿಎಆರ್ – ರಾಷ್ಟ್ರೀಯ ಕೃಷಿ ಸಂಶೋಧನಾ ನಿರ್ವಹಣಾ ಅಕಾಡೆಮಿ (ICAR-NAARM), ಹೈದರಾಬಾದನ ಎ– ಐಡಿಯಾ (a-IDEA) ಕೇಂದ್ರದ ಪ್ರಾಯೋಜಕತ್ವದಲ್ಲಿ ನಬಾರ್ಡ್ ಬೆಂಗಳೂರು ಹಾಗೂ ಬೀದರ ತೋಟಗಾರಿಕೆ ಪ್ರೊಡ್ಯುಸರ ಕಂಪನಿ ಲಿಮಿಟೆಡ್ ಸಂಸ್ಥೆಗಳ ಸಹಯೋಗದಲ್ಲಿ ಆಯೋಜಿಸಲಾಗಿದ್ದ “ನವ ಉದ್ಯಮಿಗಳು (ಸ್ಟಾರ್ಟ್ ಅಪ್ಸ್) ಹಾಗೂ ರೈತ ಉತ್ಪಾದಕರ ಸಂಸ್ಥೆ/ಸಂಘಗಳೊಂದಿಗೆ ಸಂವಾದ ( ಇಮರ್ಷನ್) ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಇತ್ತೀಚಿನ ವರ್ಷಗಳಲ್ಲಿ ಕೇಂದ್ರ ಸರಕಾರ ಹಾಗೂ ನಬಾರ್ಡ್ ಸಂಸ್ಥೆಗಳ ಮುಖಾಂತರ ಯುವಕರು, ಮಹಿಳೆಯರು ಹಾಗೂ ಇನ್ನಿತರ ರೈತಬಾಂಧವರು ತಮ್ಮದೇ ಆದ ನವ ಉದ್ಯಮಗಳನ್ನು (ಸ್ಟಾರ್ಟ್ ಅಪ್ಸ್) ಪ್ರಾರಂಭಿಸಿದ್ದಾರೆ. ಈ ನವಉದ್ಯಮಿಗಳು ತಮ್ಮ ತಂತ್ರಜ್ಞಾನದ ಬಗ್ಗೆ ಮಾಹಿತಿ, ಪ್ರಾತ್ಯಕ್ಷಿಕೆ ಹಾಗೂ ಅವರು ನಡೆದು ಬಂದ ದಾರಿಯ ಬಗ್ಗೆ ನಮಗೆ ತಿಳಿಸಲಿದ್ದಾರೆ ಎಂದು ಸಂತಸ ವ್ಯಕ್ತಪಡಿಸಿದರು. ಈ ಕಾರ್ಯಕ್ರಮವು ರೈತ ಉದ್ಯಮಿಗಳಿಗೆ ಹಾಗೂ ಇನ್ನೀತರ ರೈತರಿಗೆ ವಿವಿಧ ರೀತಿಯ ವಿಚಾರ–ವಿನಿಮಯ ಹಾಗೂ ಸಂವಾದ ನಡೆಸಲು ಒಳ್ಳೆಯ ವೇದಿಕೆಯಾಗಿ ಕಾರ್ಯನಿರ್ವಹಿಸುವುದು. ಅಷ್ಟೇ ಅಲ್ಲದೇ, ಈ ಕಾರ್ಯಕ್ರಮವು ತಂತ್ರಜ್ಞಾನ ಹಾಗೂ ಸಲಹಾ ಸೇವೆಗಳ ಮೂಲಕ ಮೌಲ್ಯವರ್ಧನೆಯಿಂದ ಆದಾಯ ಹೆಚ್ಚಿಸಲು ಪ್ರೋತ್ಸಾಹಿಸುತ್ತದೆ. ಈ ಇಮರ್ಷನ್ ಕಾರ್ಯಕ್ರಮವು ಪಾಲ್ಗೊಂಡಿರುವ ರೈತರು, FPಔಗಳು ಹಾಗೂ ಸ್ಟಾರ್ಟಪ್‌ಗಳಿಗೆ ಹೊಸ ಚಿಂತನೆ, ಹೊಸ ಬಾಂಧವ್ಯ ಮತ್ತು ಹೊಸ ಅವಕಾಶಗಳನ್ನು ನೀಡುತ್ತದೆ ಎಂದರು.

ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಆಡಳಿತ ಮಂಡಳಿಯ ಸದಸ್ಯ ಬಸವರಾಜ ಭತಮುರ್ಗೆ ಮಾತನಾಡಿ, ದೇಶದ ವಿವಿಧ ಭಾಗಗಳನ್ನು ಪ್ರತಿನಿಧಿಸುವ ಸುಮಾರು 18 ನವ ಉದ್ಯಮಿಗಳು (ಸ್ಟಾರ್ಟ್ ಅಪ್ಸ್) ಭಾಗವಹಿಸಿ, ರೈತರ ಸಮಸ್ಯೆಗಳಿಗೆ ಪರಿಹಾರವಾಗುವಂತಹ ವಿವಿಧ ಉತ್ಪನ್ನ/ ಸೇವೆಗಳ ಬಗ್ಗೆ ರೈತರಿಗೆ ಹಾಗೂ ರೈತ ಸಂಘ/ ಸಂಸ್ಥೆಗಳ ಸದಸ್ಯರಿಗೆ ಪ್ರಾತ್ಯಕ್ಷಿಕೆ ಹಾಗೂ ಮಾಹಿತಿ ನೀಡಲಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ದೇಶದ ವಿವಿಧ ಭಾಗಗಳನ್ನು ಪ್ರತಿನಿಧಿಸುವ 18 ನವ ಉದ್ಯಮಿಗಳು (ಸ್ಟಾರ್ಟ್ ಅಪ್ಸ್ ) ಭಾಗವಹಿಸಿ, ರೈತರ ಸಮಸ್ಯೆಗಳಿಗೆ ಪರಿಹಾರವಾಗುವಂತಹ ವಿವಿಧ ಉತ್ಪನ್ನ/ ಸೇವೆಗಳ ಬಗ್ಗೆ ರೈತರಿಗೆ ಹಾಗೂ ರೈತ ಸಂಘ/ ಸಂಸ್ಥೆಗಳ ಸದಸ್ಯರಿಗೆ ಪ್ರಾತ್ಯಕ್ಷಿಕೆ ಹಾಗೂ ಮಾಹಿತಿ ನೀಡಿದರು.



# ಕನ್ನೂರ ಜೋಡಿ ಕೊಲೆ:ಐವರ ಬಂಧನ, ಪರಾರಿಯಾಗಲು ಯತ್ನಿಸಿದ ಓರ್ವ ಆರೋಪಿ ಮೇಲೆ ಪೊಲೀಸರಿಂದ ಫೈರಿಂಗ್

ವಿಜಯಪುರ,ಅ.15: ತಾಲೂಕಿನ ಕನ್ನೂರು ಗ್ರಾಮದಲ್ಲಿ ಡಬಲ್ ಮರ್ಡರ್ ಪ್ರಕರಣಕ್ಕೆ ಸಂಬಂಧಿಸಿದಂತೆ ಇವರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದು, ಪೊಲೀಸರ ಮೇಲೆ ಬೈಕ್ ಹಾಯಿಸಿ ತಪ್ಪಿಸಿಕೊಳ್ಳಲು ಯತ್ನಿಸಿದ ಆರೋಪಿ ಮೇಲೆ ಪೊಲೀಸರು ಫೈರಿಂಗ್ ಮಾಡಿದ್ದಾರೆ.



ಸಾಗರ ಬೆಳ್ಳುಂಡಗಿ ಹಾಗೂ ಇಸಾಕ್ ಖರೇಷಿ ಕೊಲೆ ಮಾಡಿದ ಆರೋಪಿಗಳ ಪೈಕಿ ಒಟ್ಟು ಐದು ಆರೋಪಿಗಳನ್ನು ಬಂಧಿಸಲಾಗಿದೆ ಎಂದು ಎಸ್ಪಿ ಲಕ್ಷ್ಮಣ ನಿಂಬರಗಿ ಮಾಹಿತಿ ನೀಡಿದ್ದಾರೆ. ಆರೋಪಿ ಅಕ್ಷಯ ಶಿವಾನಂದ ಜುಲಜುಲೆ ಪೊಲೀಸರ ಮೇಲೆ ಬೈಕ್ ಹಾಯಿಸಿ ಪರಾರಿಯಾಗಲು ಯತ್ನ ನಡೆಸಿದ. ಆಗ ವಿಜಯಪುರ ಗ್ರಾಮೀಣ ಪೊಲೀಸ್ ಠಾಣೆಯ ಇನ್ಸಪೆಕ್ಟರ್ ರಾಯಗೊಂಡ ಜನಾರ ಅವರು ಆರೋಪಿ ಅಕ್ಷಯ ಶಿವಾನಂದ ಜುಲಜುಲೆ ಎಂಬುವನ ಮೇಲೆ ಫೈರಿಂಗ್ ಮಾಡಿದ್ದಾರೆ. ಇದಕ್ಕೂ ಮುಂಚೆ ಎಚ್ಚರಿಕೆ ನೀಡಲು ಮೂರು ಸುತ್ತು ಗಾಳಿಯಲ್ಲಿ ಗುಂಡು ಹಾರಿಸಿದ ಇನ್ಸಪೆಕ್ಟರ್ ನಂತರ ಆರೋಪಿ ಬಂಧನಕ್ಕೆ ಮೂರು ಸುತ್ತು ಗಾಳಿಯಲ್ಲಿ ಗುಂಡು ಹಾರಿಸಿದ್ದಾರೆ. ಆದಾಗ್ಯೂ ತಪ್ಪಿಸಿಕೊಳ್ಳಲು ಯತ್ನಿಸಿದ್ದಾನೆ. ಮತ್ತೆ ಇನ್ಸಪೆಕ್ಟರ್ ಜನಾರ ಅವರು ಗುಂಡು ಹಾರಿಸಿದ್ದಾರೆ.

ಆಗ ಆರೋಪಿ ಅಕ್ಷಯ ಜುಲಜುಲೆ ಬಲ ಮೊಳಕಾಲು ಕೆಳಗೆ ಗುಂಡು ತಾಗಿದ್ದು, ತಕ್ಷಣ ಆತನನ್ನು ಜಿಲ್ಲಾಸ್ಪತ್ರೆಗೆ ದಾಖಲು ಮಾಡಲಾಗಿದೆ. ಇತರೆ ನಾಲ್ವರು ಆರೋಪಿಗಳಾದ ಭರತ, ಸಂಜಯ್, ಸಂತೋಷ, ಮಲ್ಲನಗೌಡ ಅವರನ್ನು ಬಂಧಿಸಲಾಗಿದೆ. ಕಳೆದ 2023 ರಲ್ಲಿ ಈರನಗೌಡ ಪಾಟೀಲ ಮೇಲೆ ಹಲ್ಲೆ ಮಾಡಿದ್ದ ಆರೋಪಿಗಳಾದ ಸಾಗರ ಬೆಳ್ಳುಂಡಗಿ ಹಾಗೂ ಇಸಾಕ್ ಖರೇಷಿ ಹಲ್ಲೆ ಮಾಡಿದ್ದರು. ಆಗ ಈರನಗೌಡ ಹಲ್ಲೆಗೊಳಗಾಗಿ ಆಸ್ಪತ್ರೆಗೆ ದಾಖಲಾಗಿದ್ದರು. ಎಂಟು ತಿಂಗಳ ಬಳಿಕ ಚಿಕಿತ್ಸೆ ಫಲಕಾರಿಯಾಗದೇ ಈರನಗೌಡ ಮೃತಪಟ್ಟಿದ್ದರು. ಇದಕ್ಕೆ ಪ್ರತೀಕಾರವಾಗಿ ಈರನಗೌಡ ಸಹೋದರ ಮಲ್ಲನಗೌಡ, ಆತನ ಮಕ್ಕಳು ಸಾಗರ ಹಾಗೂ ಇಸಾಕ್ ಇಬ್ಬರನ್ನು ಕೊಲೆ ಮಾಡಿದ್ದಾರೆ.

ಕಳೆದ ಅಕ್ಟೋಬರ್ 12 ರ ರಾತ್ರಿ ಕನ್ನೂರು ಗ್ರಾಮದಲ್ಲಿ ಕೊಲೆ ಮಾಡಿದ್ದರು. ಸಾಗರ ಹಾಗೂ ಇಸಾಕ್ ತಲೆ ಮೇಲೆ ಕಲ್ಲು ಎತ್ತಿ ಹಾಕಿ ಕೊಲೆ ಮಾಡಿದ್ದರು.

ನಾಲ್ವರು ಆರೋಪಿಗಳ ವಿಚಾರಣೆ ಬಳಿಕ ಪೊಲೀಸರು ಅವರನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಲಿದ್ದಾರೆ. ಪೊಲೀಸರು ಮುಂದಿನ ತನಿಖೆಯನ್ನು ಕೈಗೊಂಡಿದ್ದು, ತನಿಖೆ ಬಳಿಕ ಮತ್ತಷ್ಟು ಸತ್ಯಾಂಶ ಹೊರಬೀಳುವ ಸಾಧ್ಯತೆ ಇದೆ. ವಿಜಯಪುರ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ

# ತ್ವರಿತವಾಗಿ ಬೆಳೆ ಹಾನಿ ಪರಿಹಾರ ನೀಡಲು ಬಿಜೆಪಿ ರೈತ ಮೋರ್ಚಾ ನಿಯೋಗ ಜಿಲ್ಲಾಧಿಕಾರಿಗಳಿಗೆ ಮನವಿ

ವಿಜಯಪುರ,ಅ.14:ಜಿಲ್ಲಾ ಬಿಜೆಪಿ ರೈತ ಮೋರ್ಚಾ ವತಿಯಿಂದ ಜಿಲ್ಲಾಧಿಕಾರಿಗಳಿಗೆ ಭೇಟಿ ಮಾಡಿ ಬೆಳೆ ಪರಿಹಾರವನ್ನು ಕೂಡಲೇ ನೀಡಬೇಕೆಂದು ಸೋಮವಾರ ಸಂಜೆ ಮನವಿ ಸಲ್ಲಿಸಲಾಯಿತು.

ರಾಜ್ಯದಲ್ಲಿ ಯಾವುದೇ ಜಿಲ್ಲೆಯಲ್ಲಿ ಆಗದಷ್ಟು ವಾಡಿಕೆಗಿಂತ ಹೆಚ್ಚಿನ ಮಳೆ ವಿಜಯವುರ ಜಿಲ್ಲೆಯಲ್ಲಿ ಆಗಿದೆ ವರದಿಗಳ ಪ್ರಕಾರ ವಾಡಿಕೆಗಿಂತ ಶೇ 150 ಕ್ಕೂ ಹೆಚ್ಚು ಮಳೆಯಾಗಿದೆ ಎಂದು ತಿಳಿದು ಬಂದಿರುತ್ತದೆ. ವಿಜಯಪುರ ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನಲ್ಲಿ ಬಿತ್ತನೆ ಮಾಡಿದ 7.50 ಲಕ್ಷ ಹೆಕ್ಟರ್ ಪ್ರದೇಶದ ಬೆಳೆ ಸಂಪೂರ್ಣ ನಾಶವಾಗಿದೆ. ಮೂರು ತಿಂಗಳಿನಿಂದ ನಿರಂತರ ಮಳೆಯಿಂದಾಗಿ ಆಗಿರುವ ಬೆಳೆ ಹಾನಿಯನ್ನು ಪ್ರಕೃತಿ ವಿಕೋಪದಿಂದ ಆಗಿರುವ ಬೆಳೆಹಾನಿ ಎಂದು ಪರಿಗಣಿಸಿ ಸರಕಾರಕ್ಕೆ ನೈಜ ಮತ್ತು ವಾಸ್ತವ ವರದಿಯನ್ನು ಸಲ್ಲಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ. “ಇದು ಭೀಮಾನದಿಯಿಂದ ಆಗಿರುವ ಪ್ರವಾಹ ಹಾಗೂ ಪ್ರಕೃತಿ ವಿಕೋಪದಿಂದ ಆಗಿರುವ ಹಾನಿ” ಒಂದಿಬ್ಬರು ತಳಮಟ್ಟದ ಅಧಿಕಾರಿಗಳನ್ನು ರೈತರ ಹೊಲಗಳಿಗೆ ಕಳುಹಿಸಿ ಸಂಪೂರ್ಣ ಬೆಳಹಾನಿಯ ಸಮೀಕ್ಷೆಯನ್ನು ಕಾಲಮಿತಿಯಲ್ಲಿ ಜಿಪಿಎಸ್ ಮೂಲಕ ಮಾಡಲು ಸಾಧ್ಯವಿಲ್ಲ. ಜಿಲ್ಲಾಧಿಕಾರಿಗಳು ನೇಮಿಸಿರುವ ಅಧಿಕಾರಿಗಳು ಪ್ರತಿ ತಾಲೂಕಿನಲ್ಲಿ ಒಂದೆರಡು ಹಳ್ಳಿಗಳ ಸಂಪೂರ್ಣ ಸಮೀಕ್ಷೆ ನಡೆಸಿ ಪಕೃತಿ ವಿಕೋಪದಿಂದಾದ ನೈಜ ಹಾನಿಯ ಬಗ್ಗೆ, ಮಾಹಿತಿಯನ್ನು ಪಡೆದುಕೊಳ್ಳಬಹುದಾಗಿದೆ. ನಿರಂತರ ಮಳೆಯಿಂದಾಗಿರುವ ಬೆಳೆ ಹಾನಿಯ ನೈಜತೆಯನ್ನು ಮುಚ್ಚಿಟ್ಟು ಸಂಕಟದಲ್ಲಿರುವ ರೈತರ ಜೊತೆ ಚೆಲ್ಲಾಟ ಆಡದಂತೆ ಜಿಲ್ಲಾ ಆಡಳಿತಕ್ಕೆ ಈ ಮೂಲಕ ಎಚ್ಚರಿಕೆ ನೀಡುತ್ತಿದ್ದೇವೆ. ಈ ಕೂಡಲೇ ವಿಜಯಪುರ ಜಿಲ್ಲೆಯ ರೈತರು ಬೆಳೆದ ಸುಮಾರು 7.50 ಲಕ್ಷ ಹೆಕ್ಟೇರ್ ಪ್ರದೇಶದ ಬೆಳೆಯನ್ನು ಪ್ರಕೃತಿ ವಿಕೋಪದಿಂದಾದ ಸಂಪೂರ್ಣ ನಷ್ಟವೆಂದು ಘೋಷಿಸಿ ಸರ್ಕಾರಕ್ಕೆ ಕೂಡಲೇ ವರದಿಯನ್ನು ಸಲ್ಲಿಸಬೇಕು ಎಂದು ಮನವಿಯಲ್ಲಿ ಕೇಳಿಕೊಳ್ಳಲಾಗಿದೆ.

ಪರಿಹಾರವನ್ನು ನಾವು ಸರ್ಕಾರಕ್ಕೆ ಕೇಳುತ್ತಿದ್ದೇವೆಯೇ ಹೊರತು ಜಿಲ್ಲಾಡಳಿತಕ್ಕಲ್ಲ. ಪರಿಹಾರ ಎಷ್ಟು ಕೊಡುತ್ತಾರೆ ಎನ್ನುವುದನ್ನು ಸರ್ಕಾರ ಮಟ್ಟದಲ್ಲಿ ತೀರ್ಮಾನಿಸಲಿ. ಮೊದಲು ವಾಸ್ತವ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಬೇಕು. ಪ್ರತಿ ಗ್ರಾಮ, ಪ್ರತಿ ಗ್ರಾಮ ಪಂಚಾಯತ್ ಪ್ರತಿ ರೈತ ಸಂಪರ್ಕ ಕೇಂದ್ರಗಳಲ್ಲಿ ಬೆಳೆಹಾನಿಗೀಡಾದ ಎಲ್ಲಾ ರೈತರ ಪಟ್ಟಿ ಲಗತ್ತಿಸಬೇಕು. ಎಲ್ಲಿಯವರೆಗೆ ಈ ಬೇಡಿಕೆ ಈಡೇರುವುದಿಲ್ಲವೋ ಅಲ್ಲಿಯವರೆಗೆ ರೈತರು ಬೀದಿಗಿಳಿದು ಹೋರಾಟ ಮಾಡಲು ಸಿದ್ಧರಾಗಿದ್ದೇವೆ. ಸಂಕಷ್ಟದಲ್ಲಿರುವ ರೈತರಿಗೆ ಸಹಾಯ ಮಾಡುವುದು ಅಧಿಕಾರಿಗಳ ಆದ್ಯ ಕರ್ತವ್ಯ. ಸಹಾಯ ಮಾಡುವಂತೆ ಕೇಳುವುದು ರೈತರ ಕಾನೂನು ಬದ್ಧ ಹಕ್ಕು. ಈ ನಮ್ಮ ಮನವಿಯನ್ನು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾಡಳಿತ ಗಂಭೀರವಾಗಿ ಪರಿಗಣಿಸಬೇಕು. ನಿರ್ಲಕ್ಷ್ಯ ತೋರಿದಲ್ಲಿ ರೈತರಿಗೆ ಅನ್ಯಾಯ ಮಾಡುವ ಪ್ರಯತ್ನ ನಡೆದಲ್ಲಿ ಕಾನೂನನ್ನು ಮೀರಿ ಹೋರಾಟಕ್ಕೆ ಇಳಿಯಬೇಕಾಗುತ್ತದೆ.




# ಸರ್ಕಾರಿ ವೈದ್ಯಕೀಯ ಕಾಲೇಜ್‌ಗೆ ಆಗ್ರಹಿಸಿ 27ನೇ ದಿನದಲ್ಲಿ ಮುಂದುವರೆದ ಧರಣಿ

ವಿಜಯಪುರ,ಅ.15: ವಿಜಯಪುರ ಜಿಲ್ಲೆಗೆ ಸರ್ಕಾರಿ ವೈದ್ಯಕೀಯ ಕಾಲೇಜ್ ಸ್ಥಾಪಿಸಬೇಕು ಎಂದು ಆಗ್ರಹಿಸಿ ಹೋರಾಟ ಸಮಿತಿ ನಗರದ ಅಂಬೇಡ್ಕರ್ ವೃತ್ತದಲ್ಲಿ ಕೈಗೊಂಡ ಧರಣಿ ಸತ್ಯಾಗ್ರಹ ಮಂಗಳವಾರ 27ನೇ ದಿನಕ್ಕೆ ಕಾಲಿಟ್ಟಿದೆ.



ಸೋಮವಾರ ಕರ್ನಾಟಕ ರಕ್ಷಣಾ ವೇದಿಕೆಯ (ಪ್ರವೀಣ ಶೆಟ್ಟಿ ಬಣ) ಸದಸ್ಯರು ಹಾಗೂ ಇಂಡಿಯನ್ ಮೆಡಿಕಲ್ ಅಸೋಸಿಯೇಶನ್ ವಿಜಯಪುರ (ಐ.ಎಂ.ಎ) ಸಂಘಟನೆಯವರು ಧರಣಿ ಸ್ಥಳಕ್ಕೆ ಭೇಟಿ ನೀಡಿ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನಾ ಹೋರಾಟ ಸಮಿತಿಗೆ ಬೆಂಬಲವನ್ನು ಸೂಚಿಸಿದರು.

ಐಎಂಎ ಅಧ್ಯಕ್ಷ ದಯಾನಂದ ಬಿರಾದಾರ ಅವರು ಮಾತನಾಡಿ, ಬಡವರಿಗೆ ಮೆಡಿಕಲ್ ಕಾಲೇಜ್ ಅವಶ್ಯಕತೆ ಇದೆ. ಸರ್ಕಾರಿ ಮೆಡಿಕಲ್ ಕಾಲೇಜ್ ಜಿಲ್ಲೆಯ ಜನರ ಬಹುದಿನಗಳ ಬೇಡಿಕೆಯಾಗಿದೆ. ಸರಕಾರಿ ಕಾಲೇಜು ಪ್ರಾರಂಭವಾದರೆ ಎಲ್ಲದಕ್ಕೂ ಮುಂದೆ ಸಹಾಯವಾಗುತ್ತದೆ ಎಂದು ಅವರು ಹೇಳಿದರು.ಐಎಂಎ ಕಾರ್ಯದರ್ಶಿ ಎಂ. ಆರ್ ಗುಡದಿನ್ನಿ ಮಾತನಾಡಿ, ನಾವು ಸದಾ ನಿಮ್ಮ ಬೆಂಬಲಕ್ಕೆ ಇದ್ದೇವೆ ಎಂದು ಹೇಳಿದರು.

ಡಾ.ಕುಲ್ಲಳ್ಳಿ ಮಾತನಾಡಿ, ವೈದ್ಯಕೀಯ ಕೋರ್ಸ್ ಬೇರೆ ಬೇರೆ ಕಡೆ ಹೋಗಿ ನಮ್ಮ ಮಕ್ಕಳು ಕಲಿಯುತ್ತಿದ್ದಾರೆ . ನಮ್ಮ ಊರಿನಲ್ಲಿ ನಮ್ಮ ಮಕ್ಕಳು ಕಲಿಯುವಂತಾದರೆ ತುಂಬಾ ಸಹಾಯವಾಗುತ್ತದೆ.ಅದಕ್ಕಾಗಿ ಸರಕಾರಿ ಕಾಲೇಜು ಅವಶ್ಯಕತೆ ಇದೆ. ನಮ್ಮ ಊರಿಗೆ ಕಾಲೇಜು ಬರುವ ಬದಲು ಬಳ್ಳಾರಿಗೆ ಹೊಯಿತು. ಅದು ಮುಂದೆ ಹೀಗೆ ಆಗಬಾರದು. ಅದಕ್ಕಾಗಿ ಸರಕಾರಿ ವೈದ್ಯಕೀಯ ಕಾಲೇಜು ಬೇಕು ಎಂದು ಹೇಳಿದರು. ಇದೇ ವೇಳೆ ಅವರು ಹೋರಾಟಕ್ಕೆ ರೂ. 25000 ದೇಣಿಗೆ ನೀಡುವುದಾಗಿಯೂ ಘೋಷಿಸಿದರು.

5000 ಸಾವಿರ ಮೆಡಿಕಲ್ ಸೀಟುಗಳನ್ನು ಮಕ್ಕಳಿಗೆ ಪ್ರತಿವರ್ಷ ಕೊಡುವುದಾದರೆ ತುಂಬಾ ಸಹಾಯವಾಗುತ್ತದೆ ಹಾಗೂ ನಮ್ಮ ಊರಿನ ಜನರಿಗೆ ಉದ್ಯೋವಕಾಶಗಳು ದೊರೆಯುತ್ತವೆ ಎಂದು ಡಾ. ಸುರೇಶ ಕಾಗಲ್ಕರ್ ಹೇಳಿದರು.ಐಎಂಎ ರಾಜ್ಯಾಧ್ಯಕ್ಷ ಡಾ.ಪರ್ಝುಲ್ ಖಾದ್ರಿ, ಡೆಂಟಲ್ ಸರ್ಜನ್ ಡಾ. ಗುಡದಿನ್ನಿ, ಡಾ ಕುಲ್ಲೊಳ್ಳಿ, ಆಲ್ ಆಮೀನ್ ಕಾಲೇಜು ಸುಪೆರಿಂಟೆಂಡೆಂಟ್ ಜಿಲಾನಿ ಅವಟಿ ಹಾಗೂ ಇನ್ನಿತರ ವೈದ್ಯರು ಭಾಗವಹಿಸಿದ್ದರು.

ಕರವೇ ಪ್ರವೀಣ ಶೆಟ್ಟಿ ಬಣದ ವಿಜಯಪುರ ಜಿಲ್ಲಾಧ್ಯಕ್ಷ ಹಾಗೂ ವಕೀಲರಾದ ಶ್ರೀಶೈಲ ಮುಳಜಿ ಅವರು ಮಾತನಾಡಿ, ಬಡವರು ಅತಿ ಕಡಿಮೆ ಖರ್ಚಿನಲ್ಲಿ ಓದಲು ಸರಕಾರಿ ಕಾಲೇಜು ನಮ್ಮ ಜಿಲ್ಲೆಗೆ ಅವಶ್ಯಕತೆ ಇದೆ. ಹೆಚ್ಚು ಶುಲ್ಕ ಕೊಟ್ಟು ಬಡವರ ಮಕ್ಕಳಿಗೆ ಓದಲು ಆಗುವುದಿಲ್ಲ ಎಂದರು.

ಕರವೇ ರಾಜ್ಯ ಉಪಾಧ್ಯಕ್ಷ ಬಸವರಾಜ ತಾಳಿಕೋಟಿ ಕೂಡ ಮಾತನಾಡಿದರು. ಶ್ರೀಕಾಂತ ರಾಥೋಡ, ಅಶೋಕ ನಾವಿ, ಸಿದ್ದನಗೌಡ ಕೊಳಗೇರಿ, ಮುರುಗೇಶ ಗಣಾಚಾರಿ, ಬಸನಗೌಡ ಪಾಟಿಲ, ಸದಾಶಿವ ಕುಂಬಾರ, ಉಮೇಶ ವಾಲಿಕರ, ಹೋರಾಟ ಸಮಿತಿ ಸದಸ್ಯರುಗಳಾದ ಅರವಿಂದ ಕುಲಕರ್ಣಿ, ಬಿ. ಭಗವಾನ್ ರೆಡ್ಡಿ, ಲಲಿತಾ ಬಿಜ್ಜರಗಿ, ವಿದ್ಯಾವತಿ ಅಂಕಲಗಿ, ಕೆ.ಎಫ್. ಅಂಕಲಗಿ, ಸುರೇಶ ಬಿಜಾಪುರ, ಲಕ್ಷ್ಮಣ ಹಂದ್ರಾಳ, ಅಬ್ದುಲ ರಹಮಾನ್ ನಾಸಿರ್, ಲಕ್ಷ್ಮಣ ಕಂಬಾಗಿ, ಶಿವಬಾಳಮ್ಮ ಕೊಂಡಗೂಳಿ, ಸಿದ್ದಲಿಂಗ ಬಾಗೇವಾಡಿ, ಭರತಕುಮಾರ ಹೆಚ್.ಟಿ., ಮಲ್ಲಿಕಾರ್ಜುನ ಹೆಚ್.ಟಿ., ಸಿದ್ರಾಮ ಹಳ್ಳೂರ, ಸಿ.ಬಿ. ಪಾಟೀಲ, ಪ್ರಭುಗೌಡ ಪಾಟೀಲ, ಜಗದೇವ ಸೂರ್ಯವಂಶಿ ಮುಂತಾದವರು ಭಾಗವಹಿಸಿದ್ದರು.

# ಶ್ರೀರಾಮ್ ಫೈನಾನ್ಸ್‌ನಿಂದ 100 ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ವಿತರಣೆ

ಆಳಂದ:ಅ.15: ಪ್ರತಿಭಾವಂತ ವಿದ್ಯಾರ್ಥಿಗಳ ಶೈಕ್ಷಣಿಕ ಪಯಣಕ್ಕೆ ಬಲ ನೀಡುವ ಉದ್ದೇಶದಿಂದ ಶ್ರೀರಾಮ್ ಫೈನಾನ್ಸ್ ಫೌಂಡೇಶನ್ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಶ್ರೀರಾಮ್ ಫೈನಾನ್ಸ್ ಲಿಮಿಟೆಡ್ ವತಿಯಿಂದ ಪಟ್ಟಣದ ಸ್ಥಳೀಯ ಕಚೇರಿಯಲ್ಲಿ 100 ಮಂದಿ ಉನ್ನತ ಸಾಧಕ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ಮತ್ತು ಸನ್ಮಾನ ಸಮಾರಂಭ ಜರುಗಿತು.

ಕಾರ್ಯಕ್ರಮಕ್ಕೆ ಸಾನ್ನಿಧ್ಯ ವಹಿಸಿದ ಆಳಂದ ಸಂಸ್ಥಾನ ಹಿರೇಮಠದ ಶ್ರೀ ಸಿದ್ದೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಆಶೀರ್ವಚನದಲ್ಲಿ ಮಾತನಾಡಿ, “ಶ್ರೀರಾಮ್ ಫೈನಾನ್ಸ್ ಸಂಸ್ಥೆ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ನೀಡಿ ಅವರ ವಿದ್ಯಾಭ್ಯಾಸಕ್ಕೆ ಶಕ್ತಿ ತುಂಬುತ್ತಿರುವುದು ಸಮಾಜ ಸೇವೆಯ ಮಹತ್ತರ ಮಾದರಿ. ವಿದ್ಯಾರ್ಥಿಗಳು ಮೊಬೈಲ್ ಹಾಗೂ ದುಶ್ಚಟಗಳಿಂದ ದೂರವಿದ್ದು, ಶ್ರಮದ ಮೂಲಕ ತಂದೆ–ತಾಯಿ ಮತ್ತು ಸಮಾಜದ ಕೀರ್ತಿಗೆ ಪಾತ್ರರಾಗಬೇಕು” ಎಂದು ಸಂದೇಶ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸ್ಟೇಟ್ ಬಿಸಿನೆಸ್ ಹೆಡ್‌ಗಳ ವೈಸ್ ಪ್ರೆಸಿಡೆಂಟ್ ಪಂಚಾಕ್ಷರಪ್ಪ ಜೆ., ಸಂಸ್ಥೆಯ ಸಾಧನೆಯ ಕುರಿತು ಮಾತನಾಡಿದರು. “ಶ್ರೀರಾಮ್ ಫೈನಾನ್ಸ್ ಸಂಸ್ಥೆಯ ಪಯಣ 1974ರಲ್ಲಿ ಶ್ರೀರಾಮ್ ಚಿಟ್ ಆಗಿ ಆರಂಭವಾಗಿ, 1979ರಲ್ಲಿ ‘ಶ್ರೀರಾಮ್ ಟ್ರಾನ್ಸ್ಪೋರ್ಟ್ ಫೈನಾನ್ಸ್ ಕಂಪನಿ ಲಿಮಿಟೆಡ್’ ಎಂಬ ಹೆಸರಿನಿಂದ ಗುರುತಿಸಿಕೊಂಡಿತು.

2022ರ ಡಿಸೆಂಬರ್ 5ರಂದು ಇದು ಶ್ರೀರಾಮ್ ಫೈನಾನ್ಸ್ ಲಿಮಿಟೆಡ್ ಆಗಿ ಪರಿವರ್ತನೆಗೊಂಡು ಇಂದು ದೇಶದ ಅಗ್ರಗಣ್ಯ ಗ್ರಾಹಕ ಆರ್ಥಿಕ ಸೇವಾ ಸಂಸ್ಥೆಯಾಗಿ ಬೆಳೆದಿದೆ. ಈ ಸಂಸ್ಥೆಯನ್ನು ಗೌರವಾನ್ವಿತ ತ್ಯಾಗರಾಜನ್ ಅವರು ಸ್ಥಾಪಿಸಿದ್ದು, ಅದರ ಸೇವೆ ಮತ್ತು ನಿಷ್ಠೆ ಎಲ್ಲರಿಗೂ ಪ್ರೇರಣೆಯಾಗಿದೆ” ಎಂದು ಅವರು ಹೇಳಿದರು.

ಮುಖ್ಯ ಅತಿಥಿಗಳಾಗಿ ಮಧುಕಾಂತ್ ಜೆ. (ವ್ಯವಹಾರ ಮುಖ್ಯಸ್ಥ, ಶ್ರೀರಾಮ್ ಫೈನಾನ್ಸ್), ನ್ಯೂ ನೋಬಲ್ ಟ್ರಾನ್ಸ್ಪೋರ್ಟ್‌ನ ಮೊಹಮ್ಮದ್ ಶಫಿಯೋದ್ದಿನ್, ಗೋವಿಂದ್ ರಾಠೋಡ್, ಶಾಖಾ ವ್ಯವಸ್ಥಾಪಕ ಸುಭಾಷ್ ರೆಡ್ಡಿ, ಟಿಪಿಜಿ ಮ್ಯಾನೇಜರ್ ಶರಣಪ್ಪ ಹಳಿಯಾಳ,ಹಾಗೂ ಸಿಬ್ಬಂದಿ ರಮೇಶ್ ಕವಲಗಾ, ಅಮರ್ ಬುದಾರಪ್, ಶಶಿಕುಮಾರ್ ಗೌಳಿ, ಮಹಾದೇವಿ, ವಷರ್‌ಾ ಮೊದಲಾದವರು ಉಪಸ್ಥಿತರಿದ್ದರು.ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಹಾಗೂ ಪೋಷಕರು ಉತ್ಸಾಹದಿಂದ ಭಾಗವಹಿಸಿದರು. ರಮೇಶ್ ಕವಲಗಾ ಕಾರ್ಯಕ್ರಮವನ್ನು ನಿರೂಪಿಸಿ, ಶಶಿಕುಮಾರ್ ಗೌಳಿ ಸ್ವಾಗತಿಸಿ ವಂದಿಸಿದರು. ಮೊಹಮ್ಮದ್ ಮೊಬಿನ್ ಸಹ ಈ ಸಂದರ್ಭ ಭಾಗಿಯಾಗಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡಿದರು.

ಈ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ವಿತರಣೆ ಜೊತೆಗೆ ಸನ್ಮಾನ ಕಾರ್ಯಕ್ರಮ ನಡೆದಿದ್ದು, ಸಾಂಸ್ಕೃತಿಕ ಕಾರ್ಯಕ್ರಮಗಳೊಂದಿಗೆ ವಿದ್ಯಾರ್ಥಿಗಳ ಸಾಧನೆಯನ್ನು ಪ್ರಶಂಸಿಸಲಾಯಿತು.





# ಮನೆ ಮನಗಳಲ್ಲಿ ದೇಶಭಕ್ತಿಯನ್ನು ಪ್ರೇರೆಪಿಸೋಣ:ಹಾರಿಕಾ



ಸೈದಾಪುರ:ಅ.15: ಭಗತ್‌ಸಿಂಗ್‌ರ ವಿಚಾರಗಳು ಸರ್ವಕಾಲಕ್ಕೂ ಪ್ರಸ್ತುತವಾಗಿದ್ದು, ಅವರ ತತ್ವಾದರ್ಶಗಳನ್ನು ಪ್ರತಿ ಮನೆ ಮನಗಳಿಗೆ ತಲುಪಿಸಿ ದೇಶಭಕ್ತಿಯನ್ನು ಪ್ರೇರೆಪಿಸೋಣ ಎಂದು ಖ್ಯಾತ ಯುವವಾಗ್ಮಿ ಹಾರಿಕಾ ಮಂಜುನಾಥ ಅಭಿಪ್ರಾಯಪಟ್ಟರು.

ಸಮೀಪದ ಕಿಲ್ಲನಕೇರಾ ಗ್ರಾಮದಲ್ಲಿ ಭಗತ್ ಬ್ರಿಗೇಡ್ ವತಿಯಿಂದ ಆಯೋಜಿಸಿ ಭಗತ್‌ಸಿಂಗ್ ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ವಿದ್ಯಾರ್ಥಿಯಾಗಿದ್ದಾಗಲೇ, ತಮ್ಮ ಸಹವರ್ತಿಗಳೊಂದಿಗೆ ಸೇರಿ ಪಂಜಾಬಿನ ಯುವಜನರನ್ನು ಸಂಘಟಿಸಿ, ಕ್ರಾಂತಿಕಾರಿ ಹೋರಾಟದೊಂದಿಗೆ ನೌಜವಾನ್ ಭಾರತ ಸಭಾ ಎಂಬ ಸಂಘಟನೆ ಕಟ್ಟಿದರು. ಕೇವಲ 23 ನೇ ವಯಸ್ಸಿನಲ್ಲಿ ಲಾಹೊರ್ ಕೇಂದ್ರ ಕಾರಾಗೃಹದಲ್ಲಿ ಇಬ್ಬರು ಸ್ನೇಹಿತರೊಂದಿಗೆ ಭಗತ್ ಸಿಂಗ್ ನಗುತ್ತಲೇ ನೇಣುಗಂಬ ಏರಿ ಹುತಾತ್ಮರಾದರು. ಅವರು ಕೇವಲ ಒಬ್ಬ ವ್ಯಕ್ತಿಯಲ್ಲ ಅವರೊಂದು ಅತಿ ದೊಡ್ಡ ಪ್ರೇರಣೆಯ ಸಂಕೇತ ಎಂದು ತಿಳಿಸಿದರು.

ಕಾಳೆಬೆಳಗುಂದಿ ಬನದೇಶ್ವರ ದೇವಸ್ಥಾನದ ಪ್ರಧಾನ ಅರ್ಚಕ ಬನದೇಶ ಸಂಕೀನ ಮಠ ಮಾತನಾಡಿ, ಪ್ರತಿ ಮನೆಯು ಸಂಸ್ಕಾರ ನೀಡುವ ಕೇಂದ್ರಗಳಾಗಬೇಕು, ಆಗ ಪ್ರತಿ ಮನೆಯಿಂದ ಭಗತ್ ಸಿಂಗ, ಹಾರಿಕಳಂತಹ ಮಕ್ಕಳನ್ನು ಕಾಣಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಇದಕ್ಕೂ ಮುಂಚೆ ಭಗತ್‌ಸಿಂಗ್ ಜಯಂತ್ಯೋತ್ಸವ ಅಂಗವಾಗಿ ಕಿಲ್ಲನಕೇರಾ ಗ್ರಾಮದಲ್ಲಿ ಭಗತ್ ಬ್ರಿಗೇಡ್ ವತಿಯಿಂದ ರಸಪ್ರಶ್ನೆ, ಪ್ರಭಂಧ ಮತ್ತು ಭಾಷಣಾ ಸ್ಪರ್ಧೆಗಳನ್ನು ಏರ್ಪಡಿಸಿ ಅವುಗಳಲ್ಲಿ ವಿಜೇತರಿಗೆ ಬಹುಮಾನಗಳನ್ನು ವಿತರಿಸಲಾಯಿತು.

ಈ ವೇಳೆ ಶಿವಸೇನೆಯ ರಾಜ್ಯ ಪ್ರಧಾನ ಕಾರ್ಯದರ್ಶಿ ವಿಜಯ ಪಾಟೀಲ್, ಮಲ್ಲೇಶ ನಾಯಕ್ ಕೂಡಲೂರು, ಯಂಕಪ್ಪ ಬಾವೂರು, ಅರ್ಚಕ ಬನದೇಶ ಸಂಕೀನ ಮಠ, ಶ್ರೀರಾಮ ಸೇನೆಯ ಜಿಲ್ಲಾಧ್ಯಕ್ಷ ಶಶಾಂಕ ನಾಯಕ್, ವೀರ ಸಾವರ್ಕರ ಸೇನಾ ಜಿಲ್ಲಾಧ್ಯಕ್ಷ ತಾಯಪ್ಪ ತಾಂಡೂರಕರ್, ಶ್ರೀರಾಮಸೇನೆಯ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಂದೀಪ ಮಹೇಂದ್ರ, ನರಸಿಂಹ ಕಡೇಚೂರು, ಶಿವಾನಂದ ವಾಲಿ, ಪೀಲಿಂಗ ಅಂಬಿಗೇರ್, ಭಗತ್ ಬ್ರಿಗೇಡ್ ಕಾರ್ಯಕರ್ತರು, ಕಿಲ್ಲನಕೇರಾ ಗ್ರಾಮಸ್ಥರು ಸೇರಿದಂತೆ ವಿವಿಧ ಗ್ರಾಮಗಳ ಯುವಕರು ಇದ್ದರು.ಭಗತ್ ಸಿಂಗ್ ಭಾವ ಚಿತ್ರದೊಂದಿಗೆ ಅದ್ಧೂರಿ ಮೆರವಣಿಗೆ: ಕಿಲ್ಲನಕೇರಾ ಗ್ರಾಮದ ರಸ್ತೆಗಳಲ್ಲಿ ಭಗತ್ ಸಿಂಗ್ ರವರ ಭಾವಚಿತ್ರದೊಂದಿಗೆ ನೂರಾರು ಯುವಕರು ಕೈಯಲ್ಲಿ ಕೇಸರಿ ಧ್ವಜಗಳನ್ನು ಹಿಡಿದು ಜೈಘೋಷಗಳ ಕೂಗುತ, ವಿವಿಧ ವಾದ್ಯಗಳನ್ನು ನುಡಿಸಿ, ಅದ್ದೂರಿಯಾಗಿ ಮೆರವಣಿಗೆ ಜರಗಿತು.

ನಮ್ಮ ದೇಶದ ಆತ್ಮವೇ ಆಧ್ಯಾತ್ಮಕತೆಯ ಸಂಸ್ಕೃತಿ. ಈ ದಿವ್ಯ ಪರಂಪರೆಯನ್ನು ಪ್ರತಿಯೊಬ್ಬರು ಅರಿಯಬೇಕಾಗಿದೆ. ಇಂದು ಕಣ್ಣಿಗೆ ಕಾಣುವ ಆಯೋಧ್ಯೆಯ ರಾಮ ಮಂದಿರ ನಿರ್ಮಾಣಕ್ಕಾಗಿ ಲಕ್ಷಾನುಗಟ್ಟಲೆ ಕರ ಸೇವಕರ ಬಲಿದಾನವಾಗಿದೆ. ಅಂತಹ ನಾಡಿನಲ್ಲಿ ಜನಿಸಿದ ನಾವುಗಳು ನಮ್ಮ ಮನೆ ಮನೆಗಳು ಆಯೋದ್ಯವಾಗಬೇಕು, ನಮ್ಮ ದೇಶ ರಾಮ ರಾಜ್ಯವಾಗುತ್ತದೆ.

# ವಿಜಯಪುರದಲ್ಲಿ ಎರಡು ದಿನಗಳ ರಾಷ್ಟ್ರೀಯ ಮಟ್ಟದ ಮಧುಮೇಹ ವೈದ್ಯಕೀಯ ಸಮ್ಮೇಳನ ಯಶಸ್ವಿ

ವಿಜಯಪುರ,ಅ.15: ನಗರದ ಖಾಸಗಿ ಹೊಟೇಲ್‌ನಲ್ಲಿ ಎರಡು ದಿನದ ರಾಷ್ಟ್ರೀಯ ಮಟ್ಟದ ಡೈಕಾನ್ ಮಧುಮೇಹ ವೈದ್ಯಕೀಯ ಸಮ್ಮೇಳನ ಯಶಸ್ವಿಯಾಗಿ ನೆರವೇರಿತು.

ಶ್ರೀ ತುಳಸಿಗಿರೀಶ ಮಧುಮೇಹ ಆಸ್ಪತ್ರೆ ಮತ್ತು ಸಂಶೋದನೆ ಕೇಂದ್ರದ ನೇತೃತ್ವದಲ್ಲಿ ಶ್ರೀ ತುಳಸಿಗಿರೀಶ ಫೌಂಡೇಶನ್, ಬಿ.ಎಲ್.ಡಿ ವಿಶ್ವವಿದ್ಯಾಲಯ, ಎ.ಸಿ.ಪಿ ಇಂಡಿಯಾ ಚಾಪ್ಟರ್, ರಾಜ್ಯ ಮಧುಮೇಹ ಸಂಶೋಧನಾ ಕೇಂದ್ರ (ಖಖಖಆಖ) ಹಾಗೂ ವಿಜಯಪುರದ ಭಾರತೀಯ ವೈದ್ಯಕೀಯ ಸಂಘದ ಸಹಯೋಗದಲ್ಲಿ ನಡೆದ ರಾಷ್ಟ್ರೀಯ ಮಧುಮೇಹ ವೈದ್ಯಕೀಯ ಸಮ್ಮೇಳನದಲ್ಲಿ (ಡೈಕಾನ್) ಭಾರತದ ವಿವಿಧ ಕಡೆಯಿಂದ ಹಾಗೂ ಕರ್ನಾಟಕದ ವಿವಿಧ ನಗರಗಳಿಂದ ಖ್ಯಾತ ವೈದ್ಯರು ಮತ್ತು ವೈದ್ಯಕೀಯ ವಿಧ್ಯಾರ್ಥಿಗಳು ಭಾಗವಹಿಸಿದರು.

ಸಮ್ಮೇಳನವನ್ನು ಸಂಘಟಿಸಿದ ನಗರದ ಖ್ಯಾತ ಮಧುಮೇಹ ತಜ್ಞ ಡಾ.ಬಾಬುರಾಜೇಂದ್ರ ಬಿ. ನಾಯಿಕ ಮಾತನಾಡಿ,ಕೇವಲ ರಾಜಧಾನಿಗಳಂತಹ ನಗರಗಳಲ್ಲಿ ಸಿಮೀತವಾಗಿದ್ದ ಇಂತಹ ಸಮ್ಮೇಳನಗಳನ್ನು ನಮ್ಮ ವಿಜಯಪುರ ಜಿಲ್ಲೆಯಲ್ಲಿ ಸತತವಾಗಿ ಆಯೋಜನೆ ಮಾಡಿರುವುದಕ್ಕೆ ಆತ್ಮಸಂತೃಪ್ತಿ ಭಾವ ನಮಗಿದೆ ಎಂದು ಸಂತಸ ವ್ಯಕ್ತಪಡಿಸಿದರು.

ಮಧುಮೇಹ ಕ್ಷೇತ್ರದಲ್ಲಿ ಅನೇಕ ಸಂಶೋಧನೆಗಳು ನಡೆಯುತ್ತಿದ್ದು, ದೇಶದ ಖ್ಯಾತ ವೈದ್ಯರುಗಳು ಆಗಮಿಸಿ ಅವರ ವಿಷಯಗಳನ್ನು ಮಂಡಿಸಿ ಚರ್ಚೆ ಮಾಡುವದರಿಂದ ಅನೇಕ ವೈದ್ಯರಿಗೆ ಮತ್ತು ವೈದ್ಯಕೀಯ ವಿಧ್ಯಾರ್ಥಿಗಳಿಗೆ ಅನುಕೂಲವಾಗುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಬಿ.ಎಲ್.ಡಿ ವಿಶ್ವವಿದ್ಯಾಲಯದ ಪ್ರೊ. ಡಾ.ವೈ.ಎಮ್. ಜಯರಾಜ, ಇಂತಹ ಕಾರ್ಯಕ್ರಮಗಳಿಂದ ಉತ್ತರ ಕರ್ನಾಟಕ ಭಾಗದ ಹಾಗೂ ವಿಜಯಪುರ ಜಿಲ್ಲೆಯ ವೈದ್ಯಕೀಯ ಕ್ಷೇತ್ರದಲ್ಲಿ ಅನುಕೂಲವಾಗಲಿದೆ ಎಂದು ಹೇಳಿದರು.

ವೇದಿಕೆ ಮೇಲೆ ಬಿ.ಎಮ್.ಪಾಟೀಲ ವೈದ್ಯಕೀಯ ಕಾಲೇಜಿನ ಮಾಜಿ ಪ್ರಾಂಶುಪಾಲ ಡಾ.ಆರ್.ಸಿ.ಬಿದರಿ, ಹಿರಿಯ ಪತ್ರಕರ್ತ ವಾಸುದೇವ ಹೆರಕಲ್, ಸಮ್ಮೇಳನದ ಸಂಘಟನಾ ಕಾರ್ಯದರ್ಶಿ ಡಾ.ಎಸ್.ಎನ್.ಬೆಂತೂರ, ಖಜಾಂಜಿ ಡಾ.ಶೀತಲ ನಾಯ್ಕ, ಸೈಂಟಿಫಿಕ್ ಕಮೀಟಿ ಪ್ರಮುಖ ಡಾ.ಮಾಧವ ಪ್ರಭು ಉಪಸ್ಥಿತರಿದ್ದರು.

ಗುಜರಾತ ರಾಜ್ಯದ ವಡೋದರದ ಡಾ.ಆಕಾಶಕುಮಾರ ಸಿಂಗ್ ಅವರು ಆರೋಗ್ಯ ಕ್ಷೇತ್ರದ ನೂತನ ಸಂಶೋಧನೆಗಳ ಕುರಿತು ಉಪನ್ಯಾಸ ನೀಡಿದರು. ಈ ವರ್ಷದ ಡಾ.ಎಮ್.ಬಿ ಪಾಟೀಲ ದತ್ತಿ ಉಪನ್ಯಾಸವನ್ನು ಬೆಂಗಳೂರಿನ ಖ್ಯಾತ ಮಧುಮೇಹ ತಜ್ಞ ಡಾ.ಅನಿಲಕುಮಾರ ನೆರವೇರಿಸಿದರು. ರಾಷ್ಟ್ರೀಯ ಮಟ್ಟದ ಖ್ಯಾತ ವೈದ್ಯ ದೆಹಲಿಯ ಡಾ.ರಾಜೇಶ ಕೇಸರಿ, ಕೋಲ್ಕತಾದ ಡಾ. ಬಿಜಯ್ ಪಟ್ನಿ, ಓರಿಸ್ಸಾದ ಡಾ.ಜಯಂತ್ ಪಾಂಡಾ, ರಾಂಚಿಯ ವಿನೀತ್ ಜಗನಾನಿ ಸೇರಿದಂತೆ ನಲವತ್ತು ವೈದ್ಯರುಗಳು ತಮ್ಮ ವಿಚಾರಗಳನ್ನು ಮಂಡಿಸಿದರು.

ಇದೇ ಸಮ್ಮೇಳನದಲ್ಲಿ ರಾಷ್ಟ್ರೀಯ ಮಟ್ಟದ ವಿಚಾರ ಮಂಡನೆ ಸ್ಪರ್ಧೆಯನ್ನು ವೈದ್ಯಕೀಯ ವಿಧ್ಯಾರ್ಥಿಗಳಿಗೆ ಆಯೋಜನೆ ಮಾಡಲಾಗಿತ್ತು.



# ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಗಳು- ಬಡವರಿಗೆ ಆರ್ಥಿಕ ಸಬಲರನ್ನಾಗಿ ಮಾಡಿವೆ:ಶಾಸಕ ಯಶವಂತರಾಯಗೌಡ ಪಾಟೀಲ



ಇಂಡಿ:ಅ.15:ಧರ್ಮಸ್ಥಳ ಕ್ಷೇತ್ರದ ಸಾರ್ವಜನಿಕ ವಲಯಗಳಲ್ಲಿ ಬಡವರಿಗೆ ಉದ್ಯೋಗ ನೀಡುವ ಮೂಲಕ ಆರ್ಥಿಕವಾಗಿ ಸಬಲರನ್ನಾಗಿ ಮಾಡಿದ್ದಾರೆ ಎಂದು ಶಾಸಕ ಯಶವಂತರಾಯಗೌಡ ಪಾಟೀಲ ಹೇಳಿದರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ .ಬಿ.ಸಿ ಟ್ರಸ್ಟ್ (ರಿ) ವಿಜಯಪೂರ ಅಖೀಲ ಕರ್ನಾಟಕ ಜನಜಾಗೃತಿ ವೇದಿಕೆ ಮಧ್ಯಪಾನ ಸಯಂ ಮಂಡಳಿ ಬೆಂಗಳೂರು ಸಹಕಾರದಲ್ಲಿ ಹಮ್ಮಿಕೊಂಡ ಗಾಂಧಿ ಜಯಂತಿ ಹಾಗೂ ವ್ಯಸನ ಮುಕ್ತ ಸಮಾಜ ನಿರ್ಮಾಣ ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು ಧರ್ಮಸ್ಥಳ ಕ್ಷೇತ್ರ ಅತ್ಯೆಂತ ಪವಿತ್ರಕ್ಷೇತ್ರವಾಗಿದ್ದು ಕೆಲ ದಿನಗಳ ಹಿಂದೆ ಅನೇಕ ಅಪಾದನೆಗಳು ಬಂದಾಗ ನಮ್ಮ ಸರಕಾರದ ಮುಖ್ಯ ಮಂತ್ರಿಯಾದ ಸಿದ್ದರಾಮಯ್ಯ ಹಾಗೂ ಗೃಹಸಚಿವರಾದ ಜಿ. ಪರಮೇಶ್ವರ ಅವರು ನಿಷ್ಪಕ್ಷಪಾತ ತನಿಖೆಯಿಂದ ಧರ್ಮಸ್ಥಳ ಪವಿತ್ತ ಕ್ಷೇತ್ರ ಎಂದು ಸಾಭೀತು ಮಾಡಿದ್ದಾರೆ. ಇಂದು ಧರ್ಮಸ್ಥಳದ ಧರ್ಮಾಧಿಕಾರಿಗಳಾದ ವಿರೇಂದ್ರ ಹೆಗ್ಗಡೆಯವರು ಸಮಾಜಿಕ ಕ್ಷೇತ್ರದಲ್ಲಿ ಸಾಕಷ್ಟು ಶ್ರಮಿಸುತ್ತಿದ್ದಾರೆ. ಇಂದು ಆರ್ಥಿಕವಾಗಿ ದುಬರ್ಲರಿಗೆ ಬಡವರಿಗೆ ಎಷ್ಟೋ ಅನಾಥರಿಗೆ ಮೇಲೆ ಎತ್ತುವ ಕೆಲಸ ಮಾಡುತ್ತಿರುವುದು ಶ್ಲಾಘನೀಯ .ಸರಕಾರಗಳು ಮಾಡದೆ ಇರುವ ಅನೇಕ ಕಾಯಕ ಧರ್ಮಸ್ಥಳದಿಂದ ನಡೆಯುತ್ತಿವೆ. ಸಮಾಜ ಪರಿಶುದ್ಧವಾಗಲಿ ವ್ಯಸನ ಮುಕ್ತ ಸಮಾಜ ನಿರ್ಮಾಣ ಮಾಡುವ ಮೂಲಕ ಅವರ ಕುಟುಂಬಗಳು ನೆಮ್ಮದಿಯಿಂದ ಬದುಕಲಿ ಆರ್ಥಿಕ ಅಭಿವೃದ್ದಿ ಹೊಂದಲಿ ಎಂದು ಜನರಲ್ಲಿ ಜಾಗೃತಿ ಮೂಡಿಸಿ ದುಶ್ಚಟಗಳಿಂದ ದೂರವಾಗಲಿ ಎಂದು ಪ್ರಚಾರ ಮಾಡುತ್ತಿದ್ದಾರೆ. ನಾಡಿನಾದ್ಯೆಂತ ಅನೇಕ ಸಾಧು -ಸಂತರಲ್ಲಿ ಇಲ್ಲಕಲ್ ಶ್ರೀಮಹಾಂತ ಮಹಾಸ್ವಾಮಿಗಳು ವ್ಯಸನ ಮುಕ್ತ ಸಮಾಜ ಕಟ್ಟಲು ಜೋಳಿಗೆಯಲ್ಲಿ ದುಶ್ಚಟಗಳು ಹಾಕಿ ಎಂದು ಜನರ ಮಧ್ಯದಲ್ಲಿ ಅಲೇದಾಡಿದ ಶರಣರು ಇಂತಹ ಕೆಲಸ ಯಾವುದೇ ಸರಕಾರಗಳಿಂದ ಅಸಾಧ್ಯ ಇಂತಹ ಮಹಾನ್ ಶರಣರ ಆದರ್ಶಗಳು ಅಳವಡಿಸಿಕೊಂಡು ಸಾಗಬೇಕು ಎಂದರು.

ಶಿರಶ್ಯಾಡ ಶ್ರೀಮಠದ ಷ.ಬ್ರ,ಮುರುಘೇಂದ್ರ ಶಿವಾಚಾರ್ಯರು ದಿವ್ಯಸಾನಿಧ್ಯವಹಿಸಿ ಆಶೀರ್ವಚನ ನೀಡಿದರು.ಎಸ್ಸಿ ಅನುರಾಧಾ ವಸ್ತ್ರದ ಮಹಾತ್ಮಾಗಾಂಧಿ ಭಾವಚಿತ್ರಕ್ಕೆ ಪುಸ್ಪನಮನ ಸಲ್ಲಿಸಿ ಮಾತನಾಡಿದರು.

ಬಿ.ಡಿ ಪಾಟೀಲ, ಪ್ರಕಾಶ ಬಿರಾದಾರ, ರುದ್ರಪ್ಪ ಪೂಜಾರಿ, ರಾಘೇಸಾಬ ನಧಾಪ, ಪ್ರಾದೇಶಿಕ ನಿರ್ದೆಶಕ ಧರ್ಮಸ್ಥಳ ಗ್ರಾಮೀಣಾಭಿವೃದ್ದಿ ಟ್ರಸ್ಟ ಕಲಬುರ್ಗಿ ದಿನೇಶ ಪೂಜಾರಿ ಹಾಗೂ ಸ್ವಸಹಾಯ ಗುಂಪುಗಳ ಮಹಿಳೆಯರು, ಜಿಲ್ಲಾ ಜನಜಾಗೃತಿ ವೇದಿಕೆ ವಿಜಯಪೂರ ಪದಾಧಿಕಾರಿಗಳು ಇದ್ದರು.

# ಬಿಎಲ್ ಡಿಇ ಆಸ್ಪತ್ರೆಯಲ್ಲಿ ಕಿವಿ ಶಸ್ತ್ರ ಚಿಕಿತ್ಸೆ ಯಶಸ್ವಿ

ವಿಜಯಪುರ,ಅ.15: ನಗರದ ಬಿ.ಎಲ್.ಡಿ.ಇ ಡಿಮ್ಡ್ ವಿಶ್ವವಿದ್ಯಾಲಯದ ಶ್ರೀ ಬಿ. ಎಂ. ಪಾಟೀಲ ಮೆಡಿಕಲ್ ಕಾಲೇಜ ಆಸ್ಪತ್ರೆಯ ಕಿವಿ,ಮೂಗು ಹಾಗೂ ಗಂಟಲು ವಿಭಾಗದಲ್ಲಿ ಹುಟ್ಟು ಶ್ರವಣ ದೋಷದಿಂದ ಬಳಲುತ್ತಿದ್ದ ಎರಡು ವರ್ಷದೊಳಗಿನ ಇಬ್ಬರು ಮಕ್ಕಳಿಗೆ ಕಾಕ್ಲಿಯರ್ ಇಂಪ್ಲಾಂಟ್ ಅತ್ಯಾಧುನಿಕ ಕಿವಿಯ ಶಸ್ತ್ರಚಿಕಿತ್ಸೆಯನ್ನು ಯಶಸ್ವಿಯಾಗಿ ಮಾಡಲಾಗಿದೆ.

ಸುವರ್ಣ ಆರೋಗ್ಯ ಸುರಕ್ಷಾ ಯೋಜನೆಯಡಿ ಗುರುವಾರ ಈ ಶಸ್ತ್ರಚಿಕಿತ್ಸೆ ನಡೆಸಲಾಗಿದ್ದು, ಈ ಯೋಜನೆಡಿ ಆಸ್ಪತ್ರೆಯಲ್ಲಿ ಈವರೆಗೆ ಐದು ಮಕ್ಕಳಿಗೆ ಕಾಕ್ಲಿಯರ್ ಇಂಪ್ಲಾಂಟ್ ಶಸ್ತ್ರಚಿಕಿತ್ಸೆ ನಡೆಸಿದಂತಾಗಿದೆ. ಅಲ್ಲದೇ, ಈ ಮಕ್ಕಳು ಈಗಾಗಲೇ ಮಾತನಾಡುವುದ ಪ್ರಕ್ರಿಯೆ ಪ್ರಾರಂಭವಾಗಿದೆ.

ಬಿ.ಎಲ್.ಡಿ.ಇ ಆಸ್ಪತ್ರೆಯಲ್ಲಿ ಈ ಯೋಜನೆಯಡಿ ಮೂರು ವರ್ಷದ ಒಳಗಿನ ಹುಟ್ಟು ಕಿವುಡ ಮಕ್ಕಳಿಗೆ ಈ ಶಸ್ತ್ರಚಿಕಿತ್ಸೆ ಲಭ್ಯವಿದ್ದು ರೂ. 6 ಲಕ್ಷ ವೆಚ್ಚದ ಕಿವಿಯ ಇಂಪ್ಲಾಂಟನ್ನು ಒಳಕಿವಿಗೆ ಅಳವಡಿಸಬಹುದಾಗಿದೆ. ನಂತರ ಎರಡು ವರ್ಷ ವಾಕ್ ಶ್ರವಣ ತರಬೇತಿಯನ್ನು ಕೊಡಲಾಗುತ್ತದೆ. ಸಾರ್ವಜನಿಕರು ಈ ಸೌಲಭ್ಯವನ್ನು ಪಡೆದುಕೊಳ್ಳಬೇಕು ಎಂದು ವೈದ್ಯಕೀಯ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ. ರಾಜೇಶ್ ಹೊನ್ನುಟಗಿತಿಳಿಸಿದ್ದಾರೆ.

ಯಾವುದೇ ಮಗು ಶಬ್ದಗಳಿಗೆ ಸ್ಪಂದಿಸದಿದ್ದರೆ ಮೂರು ತಿಂಗಳ ಒಳಗೆ ಆಸ್ಪತ್ರೆಗೆ ಬಂದು ತಪಾಸಣೆ ಮಾಡಿಸಬೇಕು ಮತ್ತು ಶ್ರವಣದೋಷ ಕಂಡುಬಂದರೆ ಒಂದೂವರೆ ವರ್ಷದೊಳಗೆ ಚಿಕಿತ್ಸೆ ಮಾಡಿಸಿದರೆ ಮಗು ಇತರ ಮಕ್ಕಳಂತೆ ಪೂರ್ಣವಾಗಿ ಮಾತನಾಡುವುದನ್ನು ಕಲಿತು ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡಬಹುದಾಗಿದೆ. ಅಲ್ಲದೇ,ಸಮಾಜದ ಮುಖ್ಯವಾಹಿನಿಗೆ ಸೇರಲು ಅನಕುಲವಾಗುತ್ತದೆ. ಆದರೆ, ಮೂರು ವರ್ಷದ ನಂತರ ಚಿಕಿತ್ಸೆ ಬಯಸಿದರೆ ಆ ಮಗುವಿಗೆ ಸರಕಾರದ ಈ ಉಚಿತ ಯೋಜನೆ ಸೌಲಭ್ಯ ಇರುವುದಿಲ್ಲ. ಬಿ.ಎಲ್.ಡಿ.ಇ ಆಸ್ಪತ್ರೆಯಲ್ಲಿ ಖಾಸಗಿಯಾಗಿಯೂ ಈ ಶಸ್ತ್ರಚಿಕಿತ್ಸೆ ಲಭ್ಯವಿದೆ. ಯಾವುದೇ ಮಗುವಿಗೆ ಈ ತರಹದ ಶಸ್ತ್ರಚಿಕಿತ್ಸೆ ಎರಡು ವರ್ಷದೊಳಗೆ ಮಾಡಿಸಿದರೆ ಮಾತ್ರ ಅತ್ಯಂತ ಒಳ್ಳೆಯ ಫಲಿತಾಂಶ ಸಿಗುತ್ತದೆ. ಆದರೆ ಐದು ವರ್ಷದ ನಂತರ ಶಸ್ತ್ರಚಿಕಿತ್ಸೆಯಾದರೂ ಮಗುವಿಗೆ ಕೇವಲ ಶಬ್ದ ಕೇಳುತ್ತದೆ ಹೊರತು ಮಾತುಗಳು ಅರ್ಥವಾಗುವ ಶಕ್ತಿ ಇರದ ಕಾರಣ ಮಾತನಾಡಲು ಬರುವುದಿಲ್ಲ ಎಂದು ಕಾಕ್ಲಿಯರ್ ಇಂಪ್ಲಾಂಟ್ ಸರ್ಜನ್ ಮತ್ತು ಇಂಪ್ಲಾಂಟ್ ಕೋ-ಆರ್ಡಿನೇಟರ್ ಡಾ. ಎಚ್. ಟಿ. ಲತಾದೇವಿ ತಿಳಿಸಿದ್ದಾರೆ.

2025ರ ಜನವರಿಯಿಂದಲೇ ಈ ಯೋಜನೆ ನಮ್ಮ ಆಸ್ಪತ್ರೆಯಲ್ಲಿ ಪ್ರಾರಂಭವಾಗಿದ್ದು, ನಮ್ಮಲ್ಲಿ ಎಲ್ಲ ನವಜಾತಶಿಶುಗಳನ್ನು ಶ್ರವಣ ಪರೀಕ್ಷೆಗಳಿಗೆ ಒಳಪಡಿಸಿ ಹುಟ್ಟು ಕಿವುಡತನ ಪತ್ತೆಹಚ್ಚುವ ಸೌಲಭ್ಯ ಹಾಗೂ ಶಸ್ತ್ರಚಿಕಿತ್ಸೆಯು ಲಭ್ಯವಿರುವುದರಿಂದ ಜನ ಸಾಮಾನ್ಯರು ಈ ಯೋಜನೆಯನ್ನು ಉಪಯೋಗಿಸಬೇಕು ಎಂದು ಕುಲಪತಿ ಡಾ. ಅರುಣ ಚಂ. ಇನಾಮದಾರ ತಿಳಿಸಿದ್ದಾರೆ.

ಬಿ.ಎಲ್.ಡಿ.ಇ ಆಸ್ಪತ್ರೆಯ ವೈದ್ಯರ ಈ ಯಶಸ್ವಿ ಶಸ್ತ್ರಚಿಕಿತ್ಸೆಗೆ ಕಾಲೇಜಿನ ಪ್ರಾಚಾರ್ಯೆ ಡಾ. ತೇಜಶ್ವಿನಿ ವಲಭ, ಸೂಪರ್ ಸ್ಪೇಷಾಲಿಟಿ ಆಸ್ಪತ್ರೆ ವೈದ್ಯಕೀಯ ನಿರ್ದೇಶಕ ಡಾ.ವಿಜಯಕುಮಾರ ಕಲ್ಯಾಣಪ್ಪನವರ ಅವರು ಎಚ್. ಟಿ. ಲತಾದೇವಿ ಮತ್ತತು ಡಾ. ವಾಸಂತಿ ಆನಂದ್ ಅವರಿಗೆ ಅಭಿನಂದನೆ ಸಲ್ಲಿಸಿದ್ದಾರೆ.











# ವೋಟ್ ಚೋರಿ ವಿರುದ್ಧ ಕಾಂಗ್ರೆಸ್ ಪ್ರತಿಭಟನೆ



ವಿಜಯಪುರ,ಅ.14: ವೋಟ್ ಚೋರಿ ವಿರುದ್ಧ ಹಾಗೂ ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಾಧೀಶರ ಮೇಲೆ ಶೂ ಎಸೆದ ಪ್ರಕರಣ ಖಂಡಿಸಿ ಕಾಂಗ್ರೆಸ್ ಕಾರ್ಯಕರ್ತರು ಜಿಲ್ಲಾ ಕಾಂಗ್ರೆಸ್ ಕಚೇರಿ ಎದುರು ಸೋಮವಾರ ಪ್ರತಿಭಟನೆ ನಡೆಸಿದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಲೋಣಿ, ಜಿಲ್ಲಾ ಕಾಂಗ್ರೆಸ್ ಪರಿಶಿಷ್ಟ ಜಾತಿ ವಿಭಾಗದ ಅಧ್ಯಕ್ಷ ರಮೇಶ ಗುಬ್ಬೇವಾಡ ಅವರ ನೇತೃತ್ವದಲ್ಲಿ ವೋಟ್ ಚೋರಿ ವಿರುದ್ಧ ಸಹಿ ಸಂಗ್ರಹಣೆ ಹಾಗೂ ಮತದಾರರ ಹಕ್ಕುಗಳ ರಕ್ಷಣೆಗೆ ಆಗ್ರಹಿಸಿ ಹಾಗೂ ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಾಧೀಶರ ಮೇಲೆ ಶೂ ಎಸೆದ ಪ್ರಕರಣ ಖಂಡಿಸಿ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಲೋಣಿ ಅವರು ಮಾತನಾಡಿ, ಇವತ್ತು ಮತಗಳ್ಳತನ ಮಾಡುವುದರ ಮೂಲಕ ಕೇಂದ್ರದಲ್ಲಿ ಬಿಜೆಪಿ ಸರಕಾರ ಅಧಿಕಾರಕ್ಕೆ ಬಂದಿದೆ ಹಾಗೂ ನಮ್ಮ ವಿಜಯಪುರ ನಗರದಲ್ಲಿಯೂ ಕೂಡ ಮತಗಳ್ಳತನ ಮಾಡಲಾಗಿದೆ ಎಂದು ಹೇಳಿದರು.

ಜಿಲ್ಲಾ ಕಾಂಗ್ರೆಸ್ ಪರಿಶಿಷ್ಟ ಜಾತಿ ವಿಭಾಗದ ಅಧ್ಯಕ್ಷ ರಮೇಶ ಗುಬ್ಬೇವಾಡ ಮಾತನಾಡಿ, ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಾಧೀಶರ ಮೇಲೆ ಶೂ ಎಸೆಯಲು ಪ್ರಯತ್ನಿಸಿರುವದು ಅತ್ಯಂತ ಹೀನಕೃತ್ಯ. ಇದು ಒಬ್ಬ ವ್ಯಕ್ತಿಯ ಅವಮಾನ ಅಲ್ಲ. ನಮ್ಮ ದೇಶದ ನ್ಯಾಯಾಂಗಕ್ಕೆ ಆದ ಅವಮಾನ. ಸಂವಿಧಾನದ ಮೌಲ್ಯಗಳು ಮತ್ತು ಕಾನೂನಿನ ಶ್ರೇಷ್ಠತೆಯ ಮೇಲಿನ ದಾಳಿಯಾಗಿದೆ. ಆದ್ದರಿಂದ ತಪ್ಪಿತಸ್ಥ ವಕೀಲನ ಮೇಲೆ ಕಾನೂನು ರೀತಿ ಕಠಿಣಕ್ರಮ ಆಗಬೇಕೆಂದು ಒತ್ತಾಯಿಸಿದರು.ಇದೇ ಸಂದರ್ಭದಲ್ಲಿ ಶಕೀಲ ಬಾಗಮಾರೆ ಮಾತನಾಡಿದರು.ಪ್ರತಿಭಟನೆಯಲ್ಲಿ ಚಾಂ ದಸಾಬ ಗಡಗಲಾವ, ದೇಸುಚವ್ಹಾಣ,ವಸಂತ ಹೊನ ಮೊಡೆ,ರಾಕೇಶ ಕಲ್ಲೂರ, ಮಹಾದೇವ ಛಲವಾದಿ, ಕೃಷ್ಣಾ ಲವಾಣಿ, ಕೃಷ್ಣಾ ಕಾಮಟೆ, ಮಲ್ಲಿಕಾರ್ಜುನ ಮಡ್ಡಿಮನಿ, ಮುತ್ತು ಬತ್ತಾಸೆ, ಪರಶುರಾಮ ಜಮಖಂಡಿ, ವಿಠ್ಠಲ ಸಂದಿಮನಿ, ಮಹಾದೇವ ಲಿಂಗದಳ್ಳಿ, ಬಸವರಾಜ ಛಲವಾದಿ, ಭಾರತಿ ಹಡಪದ, ಹರೀಶ ಕೌಲಗಿ, ಕಣಮುಚನಾಳ, ಧರ್ಮರಾಜ ಹೊಸೂರ, ಸರ್ಫರಾಜ ಅಗಸಬಾಳ, ಲಕ್ಷ್ಮಿ ಕ್ಷೀರಸಾಗರ, ಗುಲಾಬ ಚವ್ಹಾಣ, ಖಾಜಾ ಬಾಗವಾನ, ಅಬಿದ ಇಲಕಲ್, ಬಿ.ಎಂ. ಮಕ್ತೇದಾರ, ಹಮಿದಾ ಪಟೇಲ, ಸುನಂದಾ ಯಂಪೂರೆ, ರೇವಪ್ಪ ಬತ್ತಾಸೆ, ಸಿದ್ದು ಹಿರೇನಾಯಕ, ವೆಂಕಟೇಶ ಕಲಾಲ, ಮಾನಿಂಗ ಜವನರ, ಪರಸು ಡೊಳ್ಳಿ, ಲೋಕೇಶ ಜವನರ, ಎಸ್.ಎಂ. ನಾಗಠಾಣ ಮುಂತಾದವರು ಉಪಸ್ಥಿತರಿದ್ದರು.

# ಇಂದಿನ ದಿನಗಳಲ್ಲಿ ಸಂವಹನ ಕೌಶಲ್ಯ ಅಗತ್ಯ:ಪ್ರೊ.ಬಿ.ಎಲ್.ಲಕ್ಕಣ್ಣವರ

ವಿಜಯಪುರ,ಅ.15: ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿವಿಧ ಭಾಷೆಗಳ ಜ್ಞಾನ ಹಾಗೂ ಸಂವಹನ ಕೌಶಲ್ಯಗಳನ್ನು ಸಂಪಾದಿಸುವುದು ಅತ್ಯಂತ ಅಗತ್ಯವಾಗಿದೆ ಎಂದು ಮಹಿಳಾ ವಿವಿಯ ಮೌಲ್ಯಮಾಪನ ಕುಲಸಚಿವ ಪ್ರೊ.ಬಿ.ಎಲ್.ಲಕ್ಕಣ್ಣವರ ಹೇಳಿದರು.

ನಗರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದಲ್ಲಿ ಕಲಾ ನಿಕಾಯದ ವತಿಯಿಂದ ಇತ್ತೀಚೆಗೆ ಆಯೋಜಿಸಿದ್ದ 'ಸಂವಹನ ಕೌಶಲ್ಯ ಹಾಗೂ ವ್ಯಕ್ತಿತ್ವ ವಿಕಸನ: ಭಾಷಾ ಅಧ್ಯಯನದ ಮಹತ್ವ' ಎಂಬ ವಿಷಯದ ಕುರಿತ ಒಂದು ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.ಕೌಶಲಗಳು ವ್ಯಕ್ತಿತ್ವ ವಿಕಸನಕ್ಕೆ ದಾರಿಯಾಗುತ್ತವೆ. ವಿದ್ಯಾರ್ಥಿನಿಯರು ತಮ್ಮ ಸಾಮರ್ಥ್ಯವನ್ನು ಅರಿತುಕೊಂಡು,ಕೌಶಲಗಳನ್ನು ಬೆಳೆಸಿಕೊಂಡು,ಹೊಸ ಜಗತ್ತಿನ ಸವಾಲುಗಳು ಮತ್ತು ಅವಕಾಶಗಳನ್ನು ಆತ್ಮವಿಶ್ವಾಸದಿಂದ ಎದುರಿಸಲು ಸಜ್ಜಾಗಬೇಕು ಎಂದರು.

ಇದೇ ಸಂದರ್ಭದಲ್ಲಿ ನಿವೃತ್ತ ಪ್ರಾಚಾರ್ಯ ಡಾ. ಆರ್.ಜಿ.ಹೆಗಡೆ ಮಾತನಾಡಿ, ವಿದ್ಯಾರ್ಥಿಗಳು ವೃತ್ತಿಪರ ಕೌಶಲದ ಜೊತೆಗೆ ವ್ಯಕ್ತಿತ್ವದ ಕೌಶಲವನ್ನೂ ಮೈಗೂಡಿಸಿಕೊಳ್ಳಬೇಕು. ಉತ್ತಮ ಕೌಶಲಗಳು ಜೀವನದಲ್ಲಿ ಯಶಸ್ಸು ಮತ್ತು ಸಮೃದ್ಧಿಯನ್ನು ತರಲು ನೆರವಾಗುತ್ತವೆ. ಕೌಶಲಗಳ ಅಭಿವೃದ್ಧಿಯ ಮೂಲಕ ವ್ಯಕ್ತಿ ತನ್ನ ಭವಿಷ್ಯವನ್ನು ನಿರ್ಮಿಸಿಕೊಳ್ಳಬಹುದು ಎಂದರು.

ಕಾರ್ಯಾಗಾರದಲ್ಲಿ ನಿವೃತ್ತ ಪ್ರಾಧ್ಯಾಪಕ ಡಾ. ಅಮೃತ ಯಾರ್ದಿ ಮಾತನಾಡಿ, ಭಾಷೆಗಳ ಅಭ್ಯಾಸದಿಂದ ವ್ಯಕ್ತಿತ್ವವು ಪರಿಪೂರ್ಣವಾಗಿ ರೂಪುಗೊಳ್ಳುತ್ತದೆ. ವ್ಯಕ್ತಿತ್ವ ವಿಕಸನಕ್ಕಾಗಿ ಬಹುಭಾಷಿತ್ವ ಅತ್ಯಂತ ಮಹತ್ವದ್ದಾಗಿದೆ. ಅನೇಕ ಭಾಷೆಗಳ ಜ್ಞಾನ ಹೊಂದಿರುವವರು ತಮ್ಮ ಸಂವಹನ ಕೌಶಲದ ಮೂಲಕ ಪರರಾಜ್ಯಗಳಲ್ಲಿಯೂ, ಪರದೇಶಗಳಲ್ಲಿಯೂ ಸಹ ಉತ್ತಮ ಉದ್ಯೋಗಾವಕಾಶಗಳನ್ನು ಪಡೆಯಲು ಸಾಧ್ಯ ಎಂದರು.

ಕನ್ನಡ ವಿಭಾಗದ ಹಿರಿಯ ಪ್ರಾಧ್ಯಾಪಕ ಪ್ರೊ.ಮಹೇಶ ಚಿಂತಾಮಣಿ, ಕಲಾ ನಿಕಾಯದ ವಿವಿಧ ವಿಭಾಗಗಳ ಪ್ರಾಧ್ಯಾಪಕರಾದ ಪ್ರೊ.ನಾಮದೇವ ಗೌಡ, ಪ್ರೊ.ಎಂ. ನಾಗರಾಜ, ಡಾ. ನಾರಾಯಣ ಪವಾರ, ಡಾ ದೀಪಕ ಶಿಂದೆ, ಡಾ.ಅಮರನಾಥ್ ಪ್ರಜಾಪತಿ, ಡಾ.ಅಕ್ಷಯ ಯಾರ್ದಿ, ಅತಿಥಿ ಉಪನ್ಯಾಸಕರು, ಸಂಶೋಧನಾ ವಿದ್ಯಾರ್ಥಿಗಳು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮದ ಸಂಯೋಜಕಿ ಹಾಗೂ ಕಲಾ ನಿಕಾಯದ ಡೀನ್ ಪ್ರೊ.ರಾಜು ಬಾಗಲಕೋಟ ಸ್ವಾಗತಿಸಿದರು. ಹಿಂದಿ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ.ಗುಲಾಬ ರಾಠೋಡ ವಂದಿಸಿದರು.



# ಕೇಂದ್ರ ಬಿಜೆಪಿ ಸರ್ಕಾರ ಮತವನ್ನು ಕದ್ದು ಅಧಿಕಾರಕ್ಕೆ ಬಂದಿದೆ;ಅರುಣಕುಮಾರ ಪಾಟೀಲ



ಅಫಜಲಪುರ.ಅ.15: ಕೇಂದ್ರದಲ್ಲಿರುವ ಬಿಜೆಪಿ ಸರ್ಕಾರ ಜನರ ಮತವನ್ನು ಕದ್ದು ಅಧಿಕಾರಕ್ಕೆ ಬಂದಿದೆ. ಹೀಗಾಗಿ ಚುನಾವಣಾ ಆಯೋಗಕ್ಕೆ ಬಿಸಿ ಮುಟ್ಟಿಸಲು ಹಾಗೂ ಜನರ ಅಭಿಪ್ರಾಯ ತಿಳಿಸಲು ಸಹಿ ಸಂಗ್ರಹ ಅಭಿಯಾನ ನಡೆಸುತ್ತಿದ್ದು, ಮತಕ್ಷೇತ್ರದಿಂದ ಸುಮಾರು 20ಸಾವಿರಕ್ಕೂ ಹೆಚ್ಚು ಸಹಿ ಸಂಗ್ರಹ ಮಾಡಬೇಕಾಗಿದೆ ಎಂದು ಕೆಕೆಆಟಿಸಿ ಅಧ್ಯಕ್ಷ ಅರುಣಕುಮಾರ ಎಂ.ವೈ.ಪಾಟೀಲ್ ತಿಳಿಸಿದರು.

ಪಟ್ಟಣದ ಡಾ.ಬಿ.ಆರ್. ಅಂಬೇಡ್ಕರ್ ವೃತ್ತದ ಬಳಿ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ವತಿಯಿಂದ ಸಹಿ ಸಂಗ್ರಹ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಅಫಜಲಪುರ ಮತಕ್ಷೇತ್ರದಲ್ಲಿ 251 ಬೂತ್‌ಗಳಿವೆ. ಪ್ರತಿ ಬೂತ್ ನಿಂದ ಒಂದು ನೂರು ಜನರ ಮನೆಗಳಿಗೆ ಹೋಗಿ ಕೇಂದ್ರದಲ್ಲಿ ಅಧಿಕಾರ ನಡೆಸುತ್ತಿರುವ ಬಿಜೆಪಿ ಸರಕಾರ ನಡೆಸಿರುವ ಮತಕಳ್ಳತನ ಬಗ್ಗೆ ತಿಳಿಹೇಳಿ ಸಹಿ ಮಾಡಿಸಿಕೊಳ್ಳಬೇಕು.

ಕೇಂದ್ರದಲ್ಲಿರುವ ಬಿಜೆಪಿ ಸರ್ಕಾರ ನೇರವಾಗಿ ಕಾಂಗ್ರೆಸ್ ಬೆಂಬಲಿತ ಮತಗಳನ್ನು ಕಟ್ ಮಾಡಿ ಅಥವಾ ಬೋಗಸ್ ಮತದಾನ ಮಾಡುವ ಮೂಲಕ ಪ್ರಜಾಪ್ರಭುತ್ವಕ್ಕೆ ಧಕ್ಕೆ ತರುತ್ತಿದೆ ಎಂದು ದೂರಿದರು. ಕಳೆದ ವಿಧಾನಸಭೆ ಚುನಾವಣೆ ಯಲ್ಲಿಯೂ ಅಫಜಲಪುರ ಮತಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷದ ಬೆಂಬಲಿತ ಮತದಾರರನ್ನು ಉದ್ದೇಶಪೂರ್ವಕವಾಗಿ ಕಟ್ ಮಾಡಿದ್ದಾರೆ ಎಂದು ಪಾಟೀಲ ಆರೋಪ ಮಾಡಿದರು.

ಮಹಿಳಾ ಕಾಂಗ್ರೆಸ್ ಜಿಲ್ಲಾಧ್ಯಕ್ಷೆ ರೇಣುಕಾ ಸಿಂಗೆ ಮಾತನಾಡಿ, ಮತದಾನ ಸಂವಿಧಾನದ ಹಕ್ಕು, ಆದರೆ ಬಿಜೆಪಿಯವರು ಮತವೇ ಕಳ್ಳತನ ನಡೆಸಿ ಚುನಾವಣೆಯಲ್ಲಿ ಗೆದ್ದು ಅಧಿಕಾರದ ಗದ್ದುಗೆ ಏರಿ ಬಡಜನರಿಗೆ ಅನ್ಯಾಯ ಮಾಡುತ್ತಿದ್ದಾರೆ. ಹೀಗಾಗಿ ಮತ ಕಳ್ಳತನ ಬಗ್ಗೆ ಮನೆ, ಮನೆಗೆ ಹೋಗಿ ಸಹಿ ಸಂಗ್ರಹ ಅಭಿಯಾನ ನಡೆಸಲಾಗುತ್ತಿದೆ ಎಂದರು.

ಈ ಸಂದರ್ಭದಲ್ಲಿ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಪ್ರಕಾಶ್ ಜಮಾದಾರ, ಮಾಜಿ.ಜಿಪಂ.ಸದಸ್ಯ ಸಿದ್ಧಾರ್ಥ ಬಸರಗಿಡ, ಸಿದ್ದು ಸಿರಸಿಗಿ, ರಮೇಶ್ ಪೂಜಾರಿ, ಶರಣು ಕುಂಬಾರ, ದಯಾನಂದ ದೊಡ್ಮನಿ, ಶಿವಾನಂದ ಗಾಡಿ ಸಾಹುಕಾರ, ಮಲ್ಲಿಕಾರ್ಜುನ ಖರ್ಗೆ ಅತನೂರ, ಚಂದು ದೇಸಾಯಿ, ದತ್ತಾತ್ರೇಯ ಬಂಡಗಾರ, ಪ್ರವೀಣ್ ಕಲ್ಲೂರ ಸೇರಿದಂತೆ ಅನೇಕ ಕಾಂಗ್ರೆಸ್ ಮುಖಂಡರು ಭಾಗವಹಿಸಿದ್ದರು.

# ತಳ ಸಮುದಾಯದ ಕಲಾಣಕ್ಕೆ ಶೇ.100ರಷ್ಟು ಅನುದಾನ ಖರ್ಚು ಅತ್ಯಗತ್ಯ:ರಾಯಪ್ಪ ಹುಣಸಗಿ

ಕಲಬುರಗಿ,ಅ.15:ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಸಮುದಾಯದ ಕಲ್ಯಾಣಕ್ಕಾಗಿ ರಾಜ್ಯ ಸರ್ಕಾರವು ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪ ಯೋಜನೆಯಡಿ ರಾಜ್ಯ ಮತ್ತು ಜಿಲ್ಲಾ ವಲಯದಡಿ ಬಿಡುಗಡೆ ಮಾಡಿದ ಅನುದಾನವನ್ನು ಶೇ.100ರಷ್ಟು ಖರ್ಚು ಮಾಡುವುದು ಅತ್ಯಗತ್ಯವಾಗಿದೆ ಎಂದು ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಹೇಳಿದರು.

ಸೋಮವಾರ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅನುಸೂಚಿತ ಜಾತಿ ಉಪ ಯೋಜನೆ ಮತ್ತು ಅನುಸೂಚಿತ ಪಂಗಡ ಉಪ ಯೋಜನೆ ಕಾರ್ಯಕ್ರಮಗಳ ಜಿಲ್ಲಾ ಮಟ್ಟದ ಎರಡನೇ ತ್ರೈಮಾಸಿಕ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಆಯಾ ಇಲಾಖೆಗೆ ಬಿಡುಗಡೆಯಾದ ಅನುದಾನ ಕಾಲಮಿತಿಯಲ್ಲಿಲ್ಲಿಯೇ ಖರ್ಚು ಮಾಡಿ ಆರ್ಥಿಕ ಮತ್ತು ಭೌತಿಕ ಪ್ರಗತಿ ಸಾಧಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಗಂಗಾ ಕಲ್ಯಾಣ ಯೋಜನೆ ಅನುಷ್ಠಾನಕ್ಕೆ ವಿವಿಧ ನಿಗಮಗಳಿಂದ ಫಲಾನುಭವಿಗಳ ಹೆಸರು ಅನುಮೋದನೆಗೊಂಡ ಪ್ರಕರಣಗಳಲ್ಲಿ ವಿಳಂಬ ಮಾಡದೆ ಜೆಸ್ಕಾಂ ಅಧಿಕಾರಿಗಳು ವಿದ್ಯುತ್ ವಿದ್ಯುತ್ ಸಂಪರ್ಕ ಕಲ್ಪಿಸಬೇಕು. ಸಿವಿಲ್ ಕಾಮಗಾರಿಗಳ ಪ್ರಕರಣಗಳಲ್ಲಿ ಕೂಡಲೆ ಟೆಂಡರ್ ಕರೆದು ಅಂತಿಮಗೊಳಿಸಿ ಕೆಲಸ ಆರಂಭಿಸಬೇಕು. ಶಿಕ್ಷಣ ಇಲಾಖೆಯಲ್ಲಿ ನಿರೀಕ್ಷಿತ ಪ್ರಗತಿ ಸಾಧಿಸದಿರುವುದನ್ನು ಗಮನಿಸಿದ ಅವರು, ಕೂಡಲೆ ಜಿಲ್ಲಾ ಪಂಚಾಯತಿಯಿಂದ ಅನುಮೋದನೆ ಪಡೆದು ಕಾಯೋನ್ಮುಖರಾಗಬೇಕೆಂದರು.

ಜಿಲ್ಲೆಯಾದ್ಯಂತ ನಗರ ಸಂಸ್ಥಳಿಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಪೌರ ಕಾರ್ಮಿಕರಿಗೆ ವಸತಿ ಸೌಲಭ್ಯ ಕಲ್ಪಿಸಬೇಕು ಎಂದು ಪಿ.ಡಿ. ಡಿ.ಯು.ಡಿ.ಸಿ. ಅವರಿಗೆ ನಿರ್ದೇಶನ ನೀಡಿದ ಅಪರ ಜಿಲ್ಲಾಧಿಕಾರಿಗಳು, ವೈಯಕ್ತಿ ಸೌಲಭ್ಯ ಯೋಜನೆಗಳಡಿ ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಬೇಕೆಂದರು.

ಸಭೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕಿ ಪ್ರೀತಿ ದೊಡ್ಡಮನಿ ಅವರು, ಇಲಾಖಾವಾರು ಪ್ರಗತಿ ಮಾಹಿತಿ ತಿಳಿಸಿದಲ್ಲದೆ ಪ್ರಸಕ್ತ 2025–26ನೇ ಸಾಲಿಗೆ ಇದೂವರೆಗೆ ಎಸ್.ಸಿ.ಪಿ ಮತ್ತು ಟಿ.ಎಸ್.ಪಿ. ಯೋಜನೆಯಡಿ ಒಟ್ಟಾರೆ ಜಿಲ್ಲೆಗೆ 172.21 ಕೋಟಿ ರೂ. ಹಂಚಿಕೆಯಾಗಿ 115.40 ಕೋಟಿ ರೂ. ಬಿಡುಗಡೆಯಾಗಿದ್ದು,

ಇದರಲ್ಲಿ 100.91 ಕೋಟಿ ರೂ. ಖರ್ಚು ಮಾಡಲಾಗಿದೆ ಎಂದು ಅಂಕಿ–ಸಂಖ್ಯೆಗಳೊಂದಿಗೆ ವಿವಿಧ ಇಲಾಖೆಯ ಪ್ರಗತಿ ಸಭೆ ಮುಂದಿಟ್ಟರು.

ಸಭೆಯಲ್ಲಿ ಜಿಲ್ಲಾ ಪಂಚಾಯ್ ಉಪ ಕಾರ್ಯದರ್ಶಿ ಲಕ್ಷ್ಮಣ ಶೃಂಗೇರಿ, ಸಿ.ಪಿ.ಓ ಎಸ್.ಎಸ್.ಮಠಪತಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮುನಾವರ ದೌಲಾ, ತೋಟಗಾರಿಕೆ ಉಪನಿರ್ದೇಶಕ ಸಂತೋಷ ಇನಾಂದಾರ ಸೇರಿದಂತೆ ವಿವಿಧ ಇಲಾಖೆ ಮತ್ತು ನಿಗಮಗಳ ಅಧಿಕಾರಿಗಳು ಇದ್ದರು.






Owner, Editor, Printerd,and published, :-Owner - sidramayya swamy devi colony bidar - 585401, Editor-sidramayya swamy devi colony bidar, Printed at Sri sai offset printer's H.NO : 8-9-416/1 devi colony bidar - 585401 Published at H.NO:8-9-416/1 devi colony Bidar - 585401